ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 186
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಗುರುವಾರ: 02-07-2026

## ಉಸಿರುಗಟ್ಟಿಸುತ್ತಿರುವ ಗ್ಯಾರಂಟಿ ಪರಿಷ್ಕರಣೆ : ಸರ್ಕಾರದ ದಿನಕ್ಕೊಂದು ನಿರ್ಧಾರಕ್ಕೆ ರೋಸಿಹೋದ ಜನ

**ಬೆಂಗಳೂರು, ಜು.1–** ರಾಜ್ಯ ಸರ್ಕಾರ ದಿನೇದಿನೇ ಹೊಸದಾಗಿ ಜಾರಿಗೊಳಿಸುತ್ತಿರುವ ನಿಯಮಗಳು, ಕಟ್ಟುಪಾಡು ಗಳು ಜನ ಸಾಮಾನ್ಯರನ್ನು ಉಸಿರು ಗಟ್ಟಿಸಲಾರಂಭಿಸಿವೆ.ವಿಧಾನಸಭೆ ಚುನಾವಣೆಗೂ ಮುನ್ನ ಗೆಲ್ಲಲೇ ಬೇಕು ಎಂಬ ಜಿದ್ದಿಗೆ ಬಿದ್ದು, ಯಾರೂ ಕೇಳದೇ ಇದ್ದರೂ, ಸಾರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣಕ್ಕೆ ಶಕ್ತಿ, 200 ಯೂನಿಟ್ ಉಚಿತ ವಿದ್ಯುತ್‌ನ ಗೃಹಜ್ಯೋತಿ, ಮನೆ ಯಜಮಾನಿಯರಿಗೆ 2 ಸಾವಿರ ರೂ. ಮಾಸಾನದ ಗೃಹಲಕ್ಷ್ಮಿ, 10 ಕೆ.ಜಿ.ಯ ವರೆಗೂ ಉಚಿತ ಅಕ್ಕಿ ನೀಡುವ ಅನ್ನಭಾಗ್ಯ, ವಿದ್ಯಾರ್ಥಿಗಳ ಮಾಸಾಶನದ ಯುವನಿಧಿಯಂತಹ ಭರವಸೆಗಳನ್ನು ಘೋಷಣೆ ಮಾಡಿತ್ತು.

ಈ ಹಿಂದಿನ ಬಿಜೆಪಿ ಸರ್ಕಾರದ ಕೆಲ ನೀತಿಗಳು ಹಾಗೂ ಕಾನೂನು ಸುವ್ಯವಸ್ಥೆಯಂತಹ ಗಂಭೀರ ವಿಚಾರಗಳಿಂದ ಬೇಸತ್ತಿದ್ದ ಜನ, ಪರ್ಯಾಯ ಆಯ್ಕೆಯ ಬಗ್ಗೆ ಚಿಂತನೆ ನಡೆಸಿದ್ದರು. ಅಂತಹ ವೇಳೆ ಜನರಿಗೆ ಆಶಾಗೋಪುರ ತೋರಿಸುವ ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳು ಮತ್ತಷ್ಟು ಆಸೆ ಹುಟ್ಟಿಸಿದ್ದವು. ಚುನಾವಣೆಯಲ್ಲಿ ನಿರೀಕ್ಷೆ ಮೀರಿ 135 ಕಾಂಗ್ರೆಸ್ ಶಾಸಕರು ಗೆಲುವು ಕಂಡರು, ಭರ್ಜರಿ ಬಹುಮತದ ಸರ್ಕಾರಕ್ಕೆ ಹೈಕಮಾಂಡ್‌ನ ಕೃಪಾಶೀರ್ವಾದದಿಂದ ಸಿದ್ದರಾಮಯ್ಯ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಿ ಮುಖ್ಯಮಂತ್ರಿಯಾದರು.

13 ಬಜೆಟ್‌ಗಳನ್ನು ಮಂಡಿಸಿ ಆರ್ಥಿಕತೆಯ ಮೇಲೆ ಹಿಡಿತ ಹೊಂದಿದ ಸಿದ್ದರಾಮಯ್ಯ, ಯಾವುದೇ ಮುಲಾಜು ನೋಡದೆ, ಸರಳ ವಿಧಾನಗಳ ಮೂಲಕ ಅರ್ಜಿ ಸ್ವಿಕರಿಸಿ ಚುನಾವಣೆಯಲ್ಲಿ ನೀಡಿದ ವಾಗ್ದಾನದಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದರು. 200 ಯೂನಿಟ್ ಉಚಿತ ವಿದ್ಯುತ್ ಎಂಬ ಘೋಷಣೆಯಲ್ಲಿ ಕೊಂಚ ಬದಲಾವಣೆ ಮಾಡಿ, 200 ಯೂನಿಟ್‌ಗಳವರೆಗೂ ಎಂದು ಮಾರ್ಪಡಿಸಿದ್ದನ್ನು ಬಿಟ್ಟರೆ, ಉಳಿದೆಲ್ಲಾ ಗ್ಯಾರಂಟಿಗಳನ್ನು ಚಾಚೂ ತಪ್ಪದೇ ಅನುಷ್ಠಾನಗೊಳಿಸಿದ್ದರು.




ಸುಮಾರು ಎರಡೂವರೆ ವರ್ಷಗಳ ಕಾಲ ಜನರಿಗೆ ಯಾವುದೇ ತಲೆ ನೋವಿಲ್ಲದೆ ಯೋಜನೆಗಳ ಲಾಭ ದೊರೆಕಿತ್ತು. ವಿರೋಧ ಪಕ್ಷಗಳು ಎಷ್ಟೇ? ಟೀಕೆ, ಅಪಪ್ರಚಾರ ಮಾಡಿದ್ದರೂ, ಗ್ಯಾರಂಟಿಗಳ ಫಲಾನುಭವಿಗಳು ಮಾತ್ರ ಖುಷಿಯಾಗಿದ್ದರು. ಅಭಿವೃದ್ಧಿ ಕಾರ್ಯಗಳಿಗೆ ಹಣ ಸಿಗುತ್ತಿಲ್ಲ ಎಂದು ಆಡಳಿತ ಪಕ್ಷದ ಶಾಸಕರೇ ಅವಲತ್ತುಕೊಂಡರೂ, ಸಿದ್ದರಾಮಯ್ಯ ತಲೆ ಕೆಡಿಸಿಕೊಂಡಿರಲಿಲ್ಲ, ಗ್ಯಾರಂಟಿಗಳಿಗೆ ಕತ್ತರಿ ಪ್ರಯೋಗ ಮಾಡಿರಲಿಲ್ಲ.

ನಾಯಕತ್ವ ಬದಲಾವಣೆಯಾಗಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಿದ್ದಂತೆ ಹೊಸ ಹೊಸ ನಿಯಮಗಳು, ಕಟ್ಟುಪಾಡುಗಳು ಫಲಾನುಭವಿಗಳನ್ನು ರೇಜಿಗೆ ಹಿಡಿಸಿವೆ. ಈ ಮೊದಲು ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿದ್ದಾಗಲೇ ಗ್ಯಾರಂಟಿಗಳನ್ನು ಘೋಷಣೆ ಮಾಡಲಾಗಿತ್ತು. ಸಿದ್ದರಾಮಯ್ಯ ಸರ್ಕಾರ ಆರಂಭದಲ್ಲಿ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಲು ಸಮಯಾವಕಾಶ ತೆಗೆದುಕೊಂಡಾಗ, ಇದೇ ಡಿ.ಕೆ.ಶಿವಕುಮಾರ್ ಕುತ್ತಿಗೆ ಮೇಲೆ ಕೂತವರಂತೆ ಒತ್ತಡ ತಂದು ಗ್ಯಾರಂಟಿಗಳ ಅನುಷ್ಠಾನಕ್ಕೆ ಕಾರಣಕರ್ತರಾದರು. ಈಗ ತಮದೇ ನೇತೃತ್ವದ ಸರ್ಕಾರದಲ್ಲಿ ಗ್ಯಾರಂಟಿಗಳ ಫಲಾನುಭವಿಗಳು ಫಜೀತಿಗೊಳಗಾಗುವಂತೆ ಮಾಡುತ್ತಿದ್ದಾರೆ.

ರಾಜ್ಯಾದ್ಯಂತ ಇಂದಿನಿಂದ ಗೃಹಜ್ಯೋತಿಯ ಯೋಜನೆಯ ಮರು ಪರಿಶೀಲನೆ ಶುರುವಾಗಿದೆ. ಫಲಾನುಭವಿಗಳು ಮನೆಯ ದಾಖಲೆ ಪತ್ರ, ಬಾಡಿಗೆ ಅಥವಾ ಭೋಗ್ಯದ ಪತ್ರ, ಪಡಿತರ ಚೀಟಿ, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಆದಾಯ ಅಥವಾ ಜಾತಿ ಪ್ರಮಾಣ ಪತ್ರದಂತಹ ದಾಖಲೆಗಳನ್ನು ಮನೆ ಬಾಗಿಲಿಗೆ ಬರುವ ಮೀಟರ್ ರೀಡರ್‌ಗಳಿಗೆ 2ನೇಪುಟಕ್ಕೆ

## ಸಚಿವರಾದ ಡಾ.ಶರಣಪ್ರಕಾಶ್ ಆರ್. ಪಾಟೀಲ್ ರಾಯಚೂರು ಜಿಲ್ಲಾ ಪ್ರವಾಸ

ಧೈರ್ಯದ ದಾರಿ



**ರಾಯಚೂರು ಜುಲೈ 01:**ರಾಯಚೂರು ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಜುಲೈ 03 ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಜುಲೈ 03ರ ಬೆಳಿಗ್ಗೆ 12.15ಕ್ಕೆ ಕೊಪ್ಪಳ ಜಿಲ್ಲೆಯಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಸಂಜೆ 4.15ಕ್ಕೆ ರಾಯಚೂರು ನಗರಕ್ಕೆ ಆಗಮಿಸಲಿದ್ದಾರೆ.
ಸಂಜೆ 4.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಪ್ರಕೃತಿ ವಿಕೋಪದ ಕುರಿತು ಸಭೆ ನಡೆಸಲಿದ್ದಾರೆ.
ಸಭೆಯ ನಂತರ ರಾಯಚೂರಿನಿಂದ ಕಲಬುರಗಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಮಾನವಿಯಲ್ಲಿ ಗ್ರಾಮೀಣ ಹಾಗೂ ಸಂಚಾರಿ ಪೊಲೀಸ್ ಠಾಣೆ ಆರಂಭಕ್ಕೆ ಆಗ್ರಹಿಸಿ ಎಸ್‌ಪಿಗೆ ಮನವಿ

ಧೈರ್ಯದ ದಾರಿ

**ಮಾನವಿ:** ಮಾನವಿ ಪಟ್ಟಣದಲ್ಲಿ ಗ್ರಾಮೀಣ ಪೊಲೀಸ್ ಠಾಣೆ ಹಾಗೂ ಸಂಚಾರಿ (ಟ್ರಾಫಿಕ್) ಪೊಲೀಸ್ ಠಾಣೆಯನ್ನು ಮಂಜೂರು ಮಾಡುವಂತೆ ಆಗ್ರಹಿಸಿ, ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಮಾನವಿ ತಾಲೂಕು ಅಧ್ಯಕ್ಷ ನಾಸೀರ್ ಖುರೇಷಿ ಅವರು ಬುಧವಾರ ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗು ಗಿರಿ ಅವರಿಗೆ ಮನವಿ ಸಲ್ಲಿಸಿದರು.

ಗೃಹ ಸಚಿವರಿಗೆ ಸಲ್ಲಿಸಿರುವ ಮನವಿಯ ಪ್ರತಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನೀಡಿದ ಅವರು, ಮಾನವಿ ತಾಲೂಕಿನಲ್ಲಿ ಕೇವಲ ಒಂದೇ ಪೊಲೀಸ್ ಠಾಣೆ ಕಾರ್ಯನಿರ್ವಹಿಸುತ್ತಿದ್ದು, ವ್ಯಾಪಕ ಗ್ರಾಮೀಣ ಪ್ರದೇಶ, ಹೆಚ್ಚುತ್ತಿರುವ ಜನಸಂಖ್ಯೆ, ವಾಹನ ದಟ್ಟಣೆ ಹಾಗೂ ಅಪಘಾತ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಪ್ರತ್ಯೇಕ ಗ್ರಾಮೀಣ ಪೊಲೀಸ್ ಠಾಣೆ ಮತ್ತು ಸಂಚಾರಿ ಪೊಲೀಸ್ ಠಾಣೆಯ ಅಗತ್ಯವಿದೆ ಎಂದು ಮನವಿಯಲ್ಲಿ ವಿವರಿಸಿದ್ದಾರೆ.

ಇದಲ್ಲದೆ, ಮಾನವಿ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಚತುಷ್ಪಥ ರಸ್ತೆಯಲ್ಲಿ ಹೆಚ್ಚುತ್ತಿರುವ ರಸ್ತೆ ಅಪಘಾತಗಳು, ಸಂಚಾರ ನಿಯಂತ್ರಣದ ಸಮಸ್ಯೆಗಳು ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹೆಚ್ಚುವರಿ ಪೊಲೀಸ್ ಮೂಲಸೌಕರ್ಯ



ಒದಗಿಸಬೇಕೆಂದು ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಅವರು ಕೋರಿದರು. ಈ ಮನವಿಯನ್ನು ಮಾನ್ಯ ಗೃಹ ಸಚಿವರಿಗೆ ಉದ್ದೇಶಿಸಿ ಸಲ್ಲಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳಿಗೆ ಸಹ ಪ್ರತಿಗಳನ್ನು ರವಾನಿಸಲಾಗಿದೆ.

ಈ ಸಂದರ್ಭದಲ್ಲಿ ಎಐಎಂಐಎಂ ತಾಲೂಕು ಪ್ರಧಾನ ಕಾರ್ಯದರ್ಶಿ ಮೆಹಬೂಬ್ ಪಾಷಾ, ಅನ್ವರ್ ಸಾಹೇಬ್ ಬೋರ್‌ವೆಲ್, ಅವಿನಾಶ್ ನಾಯಕ್, ವಾರ್ಡ್ ನಂ. 10ರ ಅಧ್ಯಕ್ಷ ಭೀಮೇಶ್, ಹನೀಫ್ ಖುರೇಷಿ, ಸೈಯದ್ ಕರೀಂ, ಸೈಯದ್ ವಹಾಬ್, ವಾರ್ಡ್ ನಂ. 2ರ ಅಧ್ಯಕ್ಷ ಎಂ.ಡಿ. ರಾಜಾ ಹಾಗೂ ವಾರ್ಡ್ ನಂ. 25ರ ಅಧ್ಯಕ್ಷ ಎಂ.ಡಿ. ರಾಜಾ ಉಪಸ್ಥಿತರಿದ್ದರು.

## ಮಾದಕ ವ್ಯಸನದಿಂದ ಬದುಕು ಸರ್ವನಾಶ: ವಿದ್ಯಾರ್ಥಿಗಳಲ್ಲಿ ಪಿಎಸ್‌ಐ ಚಂದ್ರಶೇಖರ ಹಿರೇಮಠ ಜಾಗೃತಿ

ಧೈರ್ಯದ ದಾರಿ



**ಸಿರವಾರ, ಜುಲೈ 1:** "ಯುವ ಪೀಳಿಗೆ ಮಾದಕ ವ್ಯಸನದ ಬಲೆಗೆ ಬಿದ್ದರೆ ಇಡೀ ಬದುಕು ಸರ್ವನಾಶವಾಗುತ್ತದೆ. ಮಾದಕ ವಸ್ತುಗಳಿಗೆ 'ಬೇಡ' ಎಂದು ಹೇಳಿ, ಸುಂದರ ಜೀವನಕ್ಕೆ 'ಹೌದು' ಎಂದು ಹೇಳಿ," ಎಂದು ಸಿರವಾರ ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಶೇಖರ ಹಿರೇಮಠ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.
ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪೊಲೀಸ್ ಠಾಣೆಯು ವತಿಯಿಂದ ಹಮ್ಮಿಕೊಂಡಿದ್ದ 'ಅಂತರರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ-2026' ಅಂಗವಾಗಿ ಆಯೋಜಿಸಿದ್ದ ವಿದ್ಯಾರ್ಥಿಗಳ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಎಚ್ಚರಿಕೆ: "ವಿದ್ಯಾರ್ಥಿ ದೆಸೆ ಜೀವನದ ಅತ್ಯಂತ ಅಮೂಲ್ಯವಾದ ಘಟ್ಟ. ಈ ಹಂತದಲ್ಲಿ ನಿಮ್ಮ ಸುತ್ತಮುತ್ತ ಬೀಡಿ, ಸಿಗರೇಟ್, ಗುಟ್ಕಾ, ತಂಬಾಕು, ಮದ್ಯ ಮುಂತಾದ ಹಾನಿಕಾರಕ ವಸ್ತುಗಳ ಆಕರ್ಷಣೆಗಳು ಇರುತ್ತವೆ. ಗೆಳೆಯರ ತಪ್ಪು ಪ್ರೇರಣೆಗೆ ಅಥವಾ ಕುತೂಹಲಕ್ಕೆ ಬಿದ್ದು ಮಾದಕ ವಸ್ತುಗಳ ದಾಸರಾಗಬಾರದು. ಮಾದಕ ದ್ರವ್ಯಗಳ ಸೇವನೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಹಾಳಾಗುವುದಲ್ಲದೆ, ಉಜ್ವಲ ಭವಿಷ್ಯವೂ ಕತ್ತಲಿಗೆ ತಳ್ಳಲ್ಪಡುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ವ್ಯಸನಗಳಿಂದ ದೂರವಿದ್ದು, ಉತ್ತಮ ಶಿಕ್ಷಣ ಪಡೆಯುವ ಮೂಲಕ ದೇಶದ ಜವಾಬ್ದಾರಿಯುತ ಪ್ರಜೆಗಳಾಗಬೇಕು," ಎಂದು ಅವರು ಕರೆ ನೀಡಿದರು.
ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಹನುಮಂತ ಚನ್ನೂರು, ಇತರ ಉಪನ್ಯಾಸಕರು, ಸಿಬ್ಬಂದಿ ಹಾಗೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಪಿಎಸ್‌ಐ ಅವರು ವಿದ್ಯಾರ್ಥಿಗಳಿಗೆ ಮಾದಕ ಮುಕ್ತ ಜೀವನ ನಡೆಸುವ ಕುರಿತು ಮಾಹಿತಿ ಹಾಗೂ ಮಾರ್ಗದರ್ಶನ ನೀಡಿದರು.

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಅಂತರಾಷ್ಟ್ರೀಯ ಮಾದಕ ವಿರೋಧಿ ದಿನಾಚರಣೆ ಜಾಗೃತಿ



ಧೈರ್ಯದ ದಾರಿ

**ಸಿರವಾರ, ಜುಲೈ 1:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಿರವಾರ ವಲಯದ ವತಿಯಿಂದ, ಪಟ್ಟಣದ ಬಾಲಕರ ಸರ್ಕಾರಿ ಪ್ರೌಢಶಾಲೆಯಲ್ಲಿ 'ಅಂತರಾಷ್ಟ್ರೀಯ ಮಾದಕ ವಿರೋಧಿ ದಿನಾಚರಣೆ'ಯನ್ನು ಆಚರಿಸಲಾಯಿತು.
ಈ ಕಾರ್ಯಕ್ರಮದ ಅಂಗವಾಗಿ ಕರ್ನಾಟಕದಾದ್ಯಂತ ಶಾಲಾ-ಕಾಲೇಜುಗಳಲ್ಲಿ ಹಮ್ಮಿಕೊಳ್ಳಲಾಗಿದ್ದ ಆನ್‌ಲೈನ್ ಸಭೆಗೆ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ಜ್ಞಾನ ಮಿತ್ರ ಅವರು ದೀಪ ಬೆಳಗುವ ಮೂಲಕ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಪೂಜ್ಯ ಧರ್ಮಾಧಿಕಾರಿಗಳು ಹಾಗೂ ಮಾತೃಶ್ರೀ ಅವರು, ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ಜೀವನದಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಬಳಿಕ ಮಾತನಾಡಿದ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ವ್ಯಸನಮುಕ್ತ ಸಮಾಜ ನಿರ್ಮಾಣದಲ್ಲಿ ಯುವಜನತೆಯ ಪಾತ್ರದ ಕುರಿತು ವಿವರಿಸಿದರು. ಈ ಸಂದರ್ಭದಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸಿದ್ದ ಪೊಲೀಸ್ ಅಧಿಕಾರಿ ವೆಂಕಟೇಶ ಮತ್ತು 2ನೇ ಪುಟಕ್ಕೆ

## ರೈತರ ಖಾತೆಗಳಿಗೆ ಜೋಳದ ಹಣ ಜಮೆ ಮಾಡುವಂತೆ ಒತ್ತಾಯಿಸಿ ರೈತರಿಂದ ರಸ್ತೆ ತಡೆ ನಡೆಸಿ ಪ್ರತಿಭಟನೆ



**ಮಾನ್ವಿ:** ತಾಲೂಕಿನ ಹಿರೇಕೊಟ್ನೆಕಲ್ ಗ್ರಾಮದ ಬಳಗನೂರು ವೃತ್ತದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಸಮಿತಿ ವತಿಯಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಯಚೂರು ಸಿಂಧನೂರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ರವರಿಗೆ ಮನವಿ ಸಲ್ಲಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ ಪಾಷ ದಿದ್ದಿಗಿ ಮಾತನಾಡಿ ಸರಕಾರದ ಜೋಳ ಖರೀದಿ ಕೇಂದ್ರಗಳಲ್ಲಿ ತಾಲೂಕಿನ ರೈತರು ತಾವು ಬೆಳೆದ ಜೋಳವನ್ನು ನೀಡಿ ನಾಲ್ಕು ತಿಂಗಳು ಕಳೆದರು ಕೂಡ ಇನ್ನು ರೈತರ ಖಾತೆಗಳಿಗೆ ಹಣ ಜಮೆಯಾಗಿಲ್ಲದೆ ಇರುವುದರಿಂದ ರೈತರು ಕೃಷಿ ಚಟುವಟಿಕೆಗಳನ್ನು ನಡೆಸುವುದಕ್ಕೆ ತೊಂದರೆಯಾಗಿದು ವಾರದೊಳಗಾಗಿ ಹಿಂಗಾರು ಮತ್ತು ಮುಂಗಾರು ಜೋಳದ ಹಣವನ್ನು ಪಾವತಿ ಮಾಡದೆ ಇದ್ದರೆ ಮಾನ್ವಿ ಬಂದ್‌ಗೆ ಕರೆ ನೀಡಲಾಗುವುದು ಎಂದು ತಿಳಿಸಿದರು.
ಪ್ರತಿಭಟನೆಯಲ್ಲಿ ರೈತ ಮುಖಂಡರಾದ ವೀರಭದ್ರಪ್ಪ ಗೌಡ ಭೋಗಾವತಿ, ಬಸವರಾಜ ನಾಯಕ ಹಿರೇಕೊಟ್ನೆಕಲ್, ಹೊಳೆಪ್ಪ ಉಟಕನೂರು,ಉರಕುಂದ ಕರಡಿ ಗುಡ್ಡ, ವಿಜಯ್ ಕುಮಾರ್, ಸಿದ್ದಪ್ಪ ಅಮರಾವತಿ, ಸೇರಿದಂತೆ ಗ್ರಾಮದ ಸುತ್ತಮುತ್ತಲಿನ ಗ್ರಾಮಗಳ ನೂರಾರು ರೈತರು ಭಾಗವಹಿಸಿದ್ದರು.

**ಮೊದಲನೇ ಪುಟದಿಂದ**

## ಉಸಿರುಗಟ್ಟಿಸುತ್ತಿರುವ ಗ್ಯಾರಂಟಿ ಪರಿಷ್ಕರಣೆ : ಸರ್ಕಾರದ ದಿನಕ್ಕೊಂದು ನಿರ್ಧಾರಕ್ಕೆ ರೋಸಿಹೋದ ಜನ

ಹಾಜರು ಪಡಿಸಬೇಕಿದೆ. ಫಲಾನುಭವಿ ಆದಾಯತೆರಿಗೆ ಪಾವತಿದಾರರೇ? ಸರ್ಕಾರಿ ನೌಕರರೇ? ಎಂಬೆಲ್ಲಾ ವಿವರಗಳನ್ನು ಪರಿಶೀಲಿಸುತ್ತಿರುವುದು ನೋಡಿದರೆ ಮುಂದಿನ ದಿನಗಳಲ್ಲಿ ಯೋಜನೆಗಳಿಗೆ ಕತ್ತರಿ ಪ್ರಯೋಗವಾಗುವ ಸಾಧ್ಯತೆಗಳಿವೆ.

ಗೃಹಲಕ್ಷ್ಮಿ ಯೋಜನೆಗೂ ಇದೇ ರೀತಿಯ ದಾಖಲೆಗಳನ್ನು ಕೇಳಲಾಗುತ್ತದೆ. ಅನ್ನಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ ಎಂಬ ನೋಟೀಸ್ ಬೋರ್ಡ್‌ಗಳು ಕಾಣಿಸುತ್ತಿವೆ. ಶಕ್ತಿ ಯೋಜನೆಗೆ ಸ್ಮಾರ್ಟ್ ಕಾರ್ಡ್ ವ್ಯವಸ್ಥೆ ಜಾರಿಗೆ ಬರಲಿದೆ. ವಿದ್ಯಾರ್ಥಿಗಳ ಮಾಸಾಸನ ಯುವನಿಧಿಗೆ ಹೊರತು ಪಡಿಸಿ, ಅಧಿಕ ಹಣಕಾಸಿನ ವೆಚ್ಚ ಭರಿಸುವ ಎಲ್ಲಾ ಯೋಜನೆಗಳನ್ನು ಪರಿಷ್ಕರಿಸಲಾಗುತ್ತಿದೆ.

ಸಿದ್ದರಾಮಯ್ಯ ಅವರ ಸರ್ಕಾರ ಅನ್ನಭಾಗ್ಯ ಯೋಜನೆಯಲ್ಲಿ ಅನರ್ಹರನ್ನು ಪತ್ತೆ ಹಚ್ಚಲು ಮುಂದಾದಾಗ ದೊಡ್ಡ ಗಲಾಟೆಗಳಾಗಿತ್ತು. ಈಗ ಎಲ್ಲಾ ಗ್ಯಾರಂಟಿಗಳು ಪುನರ್ ಪರಿಶೀಲನೆಗೊಳಗಾಗುತ್ತಿವೆ. ಅದರಲ್ಲೂ ಹಿಂದೆಂದೂ ಇಲ್ಲದಷ್ಟು ದಾಖಲೆಗಳನ್ನು ಕೇಳಿ ಜನರನ್ನು ಹೈರಾಣಾಗಿಸಲಾಗುತ್ತಿದೆ.

ಒಂದೆಡೆ ಇಂದಿನಿಂದ ಫುಟ್‌ಪಾತ್ ತೆರವು ಕಾರ್ಯಾಚರಣೆ ಹೆಸರಿನಲ್ಲಿ ಬೀದಿಬದಿಯ ವ್ಯಾಪಾರಿಗಳ ಹೊಟ್ಟೆಪಾಡಿಗೆ ಕಂಟಕ ತರಲಾಗುತ್ತಿದೆ.ಮತ್ತೊಂದೆಡೆ ಬೆಂಗಳೂರಿನಲ್ಲಿ ರಸ್ತೆಯ ಬದಿಯ ವಾಹನ ನಿಲುಗಡೆಗೆ ಶುಲ್ಕ ವಿಧಿಸುವ ಜನವಿರೋಧಿ ನೀತಿ ರೂಪಿಸಲು ಸರ್ಕಾರ ಮುಂದಾಗಿದೆ.
ಅಧಿಕಾರ ಇಲ್ಲದೇ ಇದ್ದಾಗ ಬೀದಿಬದಿ ವ್ಯಾಪಾರಸ್ಥರ ವಿಚಾರದಲ್ಲಿ ಮೊಸಳೆ ಕಣ್ಣೀರು ಸುರಿಸಿ ಬೆಂಬಲ ವ್ಯಕ್ತಪಡಿಸಿದ್ದ ಕಾಂಗ್ರೆಸ್ ಪಕ್ಷ, ಅಧಿಕಾರ ಸಿಗುತ್ತಿದ್ದಂತೆ ಜೀವನೋಪಾಯದ ಮೇಲೆ ಪೆಟ್ಟು ನೀಡಲು ಮುಂದಾಗಿರುವುದು ವ್ಯಾಪಕ ಟೀಕೆಗೆ ಗುರಿಯಾಗಿದೆ.ಜನಸಾಮಾನ್ಯರಿಗೆ ಕಂಟಕವಾಗಿರುವ ರಾಜ್ಯ ಸರ್ಕಾರದ ನೀತಿಗಳ ವಿರುದ್ಧ, ವಿರೋಧ ಪಕ್ಷಗಳು ಮೌನವಹಿಸಿರುವುದು ನಾನಾ ರೀತಿಯ ಅನುಮಾನಗಳನ್ನು ಹುಟ್ಟುಹಾಕಿವೆ.

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಅಂತರಾಷ್ಟ್ರೀಯ ಮಾದಕ ವಿರೋಧಿ ದಿನಾಚರಣೆ ಜಾಗೃತಿ

ಡಾ. ದೇವಿಕಾ ಶೆಟ್ಟಿ ಅವರು, ಮಾದಕ ದ್ರವ್ಯಗಳ ಸೇವನೆಯಿಂದ ದೇಹದ ಆರೋಗ್ಯ ಹಾಗೂ ಮಾನಸಿಕ ಸ್ಥಿತಿಯ ಮೇಲೆ ಉಂಟಾಗುವ ಗಂಭೀರ ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿದರು.
ಕಾರ್ಯಕ್ರಮದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಕೋಶಾಧಿಕಾರಿ ಎ. ಅಯ್ಯಣ್ಣಗೌಡ ಐರೇಡ್ಡಿ, ಶಾಲೆಯ ಮುಖ್ಯಗುರು ಗಿರಿಜಾ, ಎಸ್‌ಡಿಎಂಸಿ (SDMC) ಸದಸ್ಯ ಮಹಮ್ಮದ್ ರಫಿ, ತಾಲೂಕು ಯೋಜನಾಧಿಕಾರಿ ಸಂದೀಪ್ ನಾಯಕ್, ಶಾಲೆಯ ಸಹ ಶಿಕ್ಷಕರಾದ ವೆಂಕಟೇಶ, ಮಂಜುನಾಥ ಹಾಗೂ ಸಂಸ್ಥೆಯ ಹಣಕಾಸು ಪ್ರಬಂಧಕರು, ಲೆಕ್ಕ ಪರಿಶೋಧಕರು, ಸೇವಾ ಪ್ರತಿನಿಧಿಗಳು ಮತ್ತು ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಕಲ್ಯಾಣ ಯೋಜನೆಗಳ ಮಾಹಿತಿ

**ರಾಯಚೂರು ಜುಲೈ 01:** ಕಾರ್ಮಿಕ ಇಲಾಖೆಯ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಯಶವಂತಪುರ ಬೆಂಗಳೂರು ವತಿಯಿಂದ ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ.
ಮಂಡಳಿಗೆ ವಂತಿಕೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು, ಕಾರ್ಯ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ವಲಯದ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಕಾರ್ಮಿಕ ಕಲ್ಯಾಣ ಯೋಜನೆಗಳು ಜಾರಿಯಲ್ಲಿರುತ್ತವೆ.
ಕಲ್ಯಾಣ ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 1ರಿಂದ ಜನವರಿ 15ನೇ ತಾರೀಖಿನೊಳಗೆ ಕಾರ್ಮಿಕರಿಂದ 50 ರೂ. ಹಾಗೂ ಮಾಲೀಕರು 100 ರೂ.ಗಳಂತೆ ಒಬ್ಬ ಕಾರ್ಮಿಕನಿಗೆ ಒಟ್ಟು 150 ರೂ.ಗಳಂತೆ ಕಾರ್ಮಿಕ ಕಲ್ಯಾಣ ನಿಧಿ ವಂತಿಕೆಯನ್ನು ಆನ್‌ಲೈನ್ ಮೂಲಕ ಪಾವತಿಸಿರಬೇಕು.
ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು, ಕಾರ್ಯ ಸಂಸ್ಥೆಗಳು https://klwbapps.karnataka.gov.in URLಇಲ್ಲಿ ನೊಂದಾಯಿಸಿ ಆನ್‌ಲೈನ್ ಮೂಲಕ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.
ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ ಪಡೆಯಲು ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಕಾರ್ಖಾನೆಗಳು, ಕಾರ್ಯಸಂಸ್ಥೆಗಳು https://klwbapps.karnataka.gov.in URL ಇಲ್ಲಿ ನೊಂದಾಯಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ ಕಲ್ಯಾಣ ಯೋಜನೆಗೆ ಕಾರ್ಮಿಕರ ಮಾಸಿಕ ವೇತನ 35,000ರೂ. ಮೀರಿರಬರದು.
ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ: ಪ್ರೌಡ ಶಾಲೆ (8 ರಿಂದ 10ನೇ ತರಗತಿವರೆಗೆ) 6,000 ರೂ. ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ 8000 ರೂ. ಪದವಿ ಶಿಕ್ಷಣಕ್ಕಾಗಿ 10.000 ರೂ. ಸ್ನಾತಕೋತ್ತರ ಶಿಕ್ಷಣಕ್ಕಾಗಿ 12,000 ರೂ. ಇಂಜಿನೀಯರಿಂಗ್, ವೈದ್ಯಕೀಯ ಶಿಕ್ಷಣಕ್ಕಾಗಿ 20.000 ರೂ.ಗಳ ಪ್ರೋತ್ಸಾಹ ಸಹಾಯಧನ ನೀಡಲಾಗುವುದು. (ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳು ಶೇ.45ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಇಬ್ಬರು,ವಿದ್ಯಾರ್ಥಿಗಳಿಗೆ (ಮಕ್ಕಳಿಗೆ) ಮಾತ್ರ ಈ ಸೌಲಭ್ಯ ನೀಡಲಾಗುವುದು.
ಈ ಕೆಳಗಿನ ಕಲ್ಯಾಣ ಯೋಜನೆಗಳಿಗೆ ಕಾರ್ಮಿಕರ ಮಾಸಿಕ ಸಂಬಳದ ಮಿತಿಯಿರುವುದಿಲ್ಲ.ವಯೋಮಿತಿ 18-60 ವರ್ಷದೊಳಗೆ ಇರಬೇಕು.
ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಸಹಾಯಧನ: ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕರು ಮೃತಪಟ್ಟ 6 ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸಂಬಂದಪಟ್ಟ ಸಂಸ್ಥೆಗಳು ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ 20,000 ರೂ. ಸಹಾಯಧನ ನೀಡಲಾಗುವುದು.
ಮಹಿಳಾ ಕಾರ್ಮಿಕರಿಗೆ ಹೆರೆಗೆ ಭತ್ಯ ಸೌಲಭ್ಯ ಸಹಾಯಧನ: ಮಹಿಳ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಸೌಲಭ್ಯವನ್ನು ತಲಾ 10.000 ರೂ.ಗಳಂತೆ ಸಹಾಯ ಧನ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ನಿಗದಿತ ಅರ್ಜಿ ನಮೋನೆಯಲ್ಲಿ ಸಂಬಂದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ಅರ್ಜಿ ಸಲ್ಲಿಸಬೇಕು.
ಕಾರ್ಮಿಕರಿಗೆ ವೈದ್ಯಕೀಯ ನೆರವು: ಹೃದಯ ಶಸ್ತ್ರ ಚಿಕಿತ್ಸೆ. ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ, ಕಿಡ್ನಿ ಟ್ರಾನ್ಸ್ಪಾಂಟೇಶನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಆರ್ಥೋಪೆಡಿಕ್, ಗರ್ಭ ಕೋಶದ ಶಸ್ತರ ಚಿಕಿತ್ಸೆ, ಲಿವರ್, ಹರ್ನಿಯ, ಕಿವಿ ಹಾಗೂ ಕಿಡ್ನಿ ಕಲ್ಲುಗಳ ಶಸ್ತ್ರ ಚಿಕಿತ್ಸೆಗಳಿಗೆ ಕನಿಷ್ಠ 1,000 ರೂ. ರಿಂದ ಗರಿಷ್ಠ 25,000 ರೂ.ವರೆಗೆ ಮತ್ತು ಪ್ರತಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆಗೆ 500 ರೂ. ರಿಂದ 1000 ರೂ.ವರೆಗೆ ಸಹಾಯ ಧನ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕು ಚಿಕಿತ್ಸೆ ಪಡೆದ 6 ತಿಂಗಳೊಳಗೆ ನಿಗದಿತ ಅರ್ಜಿ ನಮೋನೆಯಲ್ಲಿ ಸಂಬಂದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿತಕ್ಕದ್ದು.
ಕಾರ್ಮಿಕರಿಗೆ ಅಪಘಾತ ಸಹಾಯಧನ: ಕಾಮೀಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಲ್ಲಿ ಕನಿಷ್ಠ 1000 ರೂ. ರಿಂದ ಗರಿಷ್ಠ 10,000 ರೂ.ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೂಳಗೆ ವೈದ್ಯಕೀಯ ದಾಖಲೆಗಳೂಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಸಂಬಂದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.
ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೂಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಸಹಾಯಧನ: ಸಂಘಟಿತ ವಲಯದ ಕಾರ್ಮಿಕರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ನೊಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೂಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ 1,00,000 ರೂ. ಸಹಾಯಧನ ನೀಡಲಾಗುವುದು.
ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಸಹಾಯಧನ: ಸಂಘಟಿತ ವಲಯದ ಕಾರ್ಮಿಕರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ನೊಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೋಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ 1,00,000 ರೂ. ಸಹಾಯಧನ ನೀಡಲಾಗುವುದು.
ಸಹಾಯಧನವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ NEFT/RTGS ಮೂಲಕ ಜಮಾ ಮಾಡಲಾಗುವುದು.
ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಕಲ್ಯಾಣ ಭವನ ನಂ.48, 2ನೇ ಮಹಡಿ ಮತ್ತೀಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022. ದೂರವಾಣಿ ಸಂಖ್ಯೆ: 080-23475188, 8277291175, 8277120505, 9141602562ಗೆ ಸಂಪರ್ಕ ಮಾಡಬಹುದಾಗಿದೆ. ಅಥವಾ ವೆಬ್‌ಸೈಟ್ ವಿಳಾಸ: www.klwb.karnataka.gov.in ಅಥವಾ ಇಮೇಲ್ ಐಡಿ: welfarecommissioner123@gmail.com ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಾರ್ಮಿಕ ಕಲ್ಯಾಣ ಮಂಡಳಿಯ ಆಯುಕ್ತರು ತಿಳಿಸಿದ್ದಾರೆ.

# ರಾಯಚೂರಿನ ತಹಶೀಲ್ದಾರ್ ಕಚೇರಿಯಲ್ಲಿ ಸರಳವಾಗಿ ಕಂದಾಯ ದಿನ ಆಚರಣೆ



ಧೈರ್ಯದ ದಾರಿ

**ರಾಯಚೂರು ಜುಲೈ 01:** ರಾಯಚೂರಿನ ತಹಶೀಲ್ದಾರ್ ಕಚೇರಿಯಲ್ಲಿ ಜುಲೈ 01ರ ಬುಧವಾರ ದಂದು ಕಂದಾಯ ದಿನದ ಅಂಗವಾಗಿ ಕಚೇರಿಯ ಸಿಬ್ಬಂದಿಗಳಿಗೆ ಸಿಹಿ ಹಂಚುವ ಮೂಲಕ ಸರಳವಾಗಿ ಆಚರಣೆ ಮಾಡಲಾಯಿತು.
ಈ ವೇಳೆ ತಹಶೀಲ್ದಾರ್ ಸುರೇಶ ವರ್ಮಾ ಅವರು ಮಾತನಾಡಿ, ಸ್ವಾತಂತ್ರ ಪೂರ್ವ ಹಾಗೂ ನಂತರದಲ್ಲಿ ಕಂದಾಯ ಇಲಾಖೆಯು ದೇಶದ ಅಭಿವೃದ್ಧಿಯಲ್ಲಿ ತನ್ನದೇ ಆದ ಪಾತ್ರ ವಹಿಸುತ್ತಿದೆ. ಜನ ಸಾಮಾನ್ಯರೊಂದಿಗೆ ನಿಕಟ ಸಂಪರ್ಕ ಹೊಂದುವ, ಅವರ ಕಷ್ಟ ಸುಖಗಳಿಗೆ ಹೆಚ್ಚು ಸ್ಪಂದಿಸುವ ಅವಕಾಶ ಕಂದಾಯ ಇಲಾಖೆಯ ನೌಕರರಿಗೆ ಸಿಗಲಿದೆ. ಆ ನಿಟ್ಟಿನಲ್ಲಿ ಇಲಾಖೆ ಇನ್ನಷ್ಟು ಜನಸ್ನೇಹಿಯಾಗಬೇಕು ಎಂದರು.
ವಿಜ್ಞಾನ ತಂತ್ರಜ್ಞಾನ ಮುಂದುವರಿಯುತ್ತಿದೆ. ಅದಕ್ಕನುಗುಣವಾಗಿ ಸರಕಾರವು ಜಾರಿಗೆ ತರುವ ಎಲ್ಲ ಯೋಜನೆಗಳೂ ಸಹ ತಾಂತ್ರಿಕತೆಯನ್ನು ಅವಲಂಬಿಸಿವೆ. ಅವುಗಳ ಉಪಯೋಗ ಪಡೆಯಲು ಜನ ಸಾಮಾನ್ಯರೂ ತಾಂತ್ರಿಕ ಬಳಕೆಗೆ ಮುಂದಾಗಬೇಕಿದೆ ಎಂದರು.
ಇದೇ ಸಂದರ್ಭದಲ್ಲಿ ತಹಶೀಲ್ದಾರ್ ಕಚೇರಿಯ ಹಿರಿಯ ಅಧಿಕಾರಿಗಳು, ಕಿರಿಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸ್ಥಳಾಂತರ

**ರಾಯಚೂರು ಜುಲೈ 01:** ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ರಾಯಚೂರಿನ ಬುಡ್ಡಿಬಾಬಾ ದರ್ಗಾ ಹತ್ತಿರದ ಆರ್.ಆರ್.ಕಾಲೋನಿಗೆ ಸ್ಥಳಾಂತರವಾಗಿದ್ದು, ಸಾರ್ವಜನಿಕರು ಸಹಕಾರಿಸುವಂತೆ ಕೋರಲಾಗಿದೆ.

ಈ ಹಿಂದೆ ಡಾ.ಕಿಶನ್ ರಾವ್ ಕಟ್ಟಡ ಆಶಾಪೂರು ಕ್ರಾಸ್ ಸ್ಟೇಷನ್ ರೋಡ್ ರಾಯಚೂರಿನಲ್ಲಿ ಕಚೇರಿಯು ಕಾರ್ಯ ನಿರ್ವಹಣೆ ಮಾಡಲಾಗುತ್ತಿತ್ತು. ಪ್ರಸ್ತುತ ರಾಯಚೂರಿನ ಬುಡ್ಡಿಬಾಬಾ ದರ್ಗಾ ಹತ್ತಿರದ ಆರ್.ಆರ್.ಕಾಲೋನಿಗೆ ಸ್ಥಳಾಂತರವಾಗಿದ್ದು, ಸಾರ್ವಜನಿಕರು ಪತ್ರ ವ್ಯವಹಾರ ಹಾಗೂ ಸರ್ಕಾರದ ವಿವಿಧ ಸೌಲಭ್ಯ, ಯೋಜನೆಗಳ ಕುರಿತು ಈ ವಿಳಾಸಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಇಲಾಖೆಯಿಂದ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 01:** ರಾಯಚೂರು ಕೃಷಿ ಇಲಾಖೆಯಿಂದ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಆತ್ಮ ಯೋಜನೆಯಡಿ 2026-27ನೇ ಸಾಲಿನಲ್ಲಿ ನೇರ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ಹಾಗೂ ಹೊಸದಾಗಿ ಮಂಜೂರಾದ ತಾಲೂಕಾ ತಾಂತ್ರಿಕ ವ್ಯವಸ್ಥಾಪಕರು ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರುಗಳ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತಾಲೂಕ ತಾಂತ್ರಿಕ ವ್ಯವಸ್ಥಾಪಕರು (ಬಿಟಿಎಮ್) 02 ಹುದ್ದೆಗೆ ಕೃಷಿ ಅಥವಾ ಕೃಷಿ ಸಂಬಂಧಿತ ಸ್ನಾತಕೋತ್ತರ ಪದವಿ ಮತ್ತು ಕಂಪ್ಯೂಟರ್ ಜ್ಞಾನ ಅಥವಾ ಕೃಷಿ/ಕೃಷಿ ಸಂಬಂಧಿತ ಪದವಿಯೊಂದಿಗೆ 5 ವರ್ಷ ಸಹಾಯಕ ತಾಂತ್ರಿಕ ವಸ್ಥಾಪಕರಾಗಿ ಕಾರ್ಯನಿರ್ವಹಿಸಿದ ಅನುಭವ. 2 ವರ್ಷ ಕೃಷಿ ಸಂಬಂಧಿತ ಚಟುವಟಿಕೆಯಲ್ಲಿ ಅನುಭವ ಹೊಂದಿರಬೇಕು.

ಸಹಾಯಕ ತಾಂತ್ರಿಕ ವ್ಯವಸ್ಥಾಪಕರು (ಎಟಿಎಮ್) 08 ಹುದ್ದೆಗಳಿಗೆ ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ 1 ವರ್ಷ ಕೃಷಿ ಸಂಬಂಧಿತ ಚಟುವಟಿಕೆಯಲ್ಲಿ ಅನುಭವ ಹೊಂದಿರಬೇಕು.

ಅಭ್ಯರ್ಥಿಗಳು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಾಗಿದ್ದಲ್ಲಿ (ಎಸಿ/ಎಸ್.ಟಿ)  40 ವರ್ಷ, ಸಾಮಾನ್ಯ 35 ಹಾಗೂ ಇತರೆ (ಒಬಿಸಿ) 38 ವಯೋಮಿತಿಯನ್ನು ಹೊಂದಿರಬೇಕು. ಅಥವಾ ಈಗಾಗಲೇ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು (ಬಿಟಿಎಮ್) ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕರು (ಎಟಿಎಮ್)ಗಳಾಗಿ ಕಾರ್ಯನಿರ್ವಹಿಸಿ ಅನುಭವ ಹೊಂದಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

ಅಭ್ಯರ್ಥಿಗಳು ಛಾಯಾಚಿತ್ರ ಲಗತ್ತಿಸಿದ ವೈಯಕ್ತಿಕ ಮಾಹಿತಿ, ವಿದ್ಯಾರ್ಹತೆ, ದಾಖಲೆ, ಅನುಭವ ಪ್ರಮಾಣ ಪತ್ರ, ಆಧಾರ ಪ್ರತಿ, ಕಂಪ್ಯೂಟರ್ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ ಈ ಎಲ್ಲಾ ದಾಖಲೆಗಳ ದೃಡೀಕೃತ ಪ್ರತಿಗಳನ್ನು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕರ ಕಚೇರಿ, ರಾಯಚೂರು 584101ಗೆ ಅಂಚೆ ಮುಖಾಂತರ ಅಥವಾ ಖುದ್ದಾಗಿ ಜುಲೈ 16ರ ಸಂಜೆ 5.30ರೊಳಗಾಗಿ ತಲುಪುವಂತೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಕೃಷಿ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯನ್ನು ಕಚೇರಿಯ ಸಮಯದಲ್ಲಿ ಭೇಟಿ ನೀಡಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸೋದ್ಯಮ ಇಲಾಖೆಯಿಂದ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ರಾಯಚೂರು ಜುಲೈ 01:** ಪ್ರವಾಸೋದ್ಯಮ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಎಸ್‌ಸಿಪಿ-ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮದಾರರನ್ನು ಉತ್ತೇಜಿಸಲು ಒಂದು ತಿಂಗಳ ಉದ್ಯಮಶೀಲತಾ ತರಬೇತಿ ಹಾಗೂ ಮೊಬೈಲ್ ಕ್ಯಾಂಟೀನ್ ಖರೀದಿಸಲು ಆಯ್ಕೆಯಾದ ಪ್ರತಿ ಫಲಾನುಭವಿಗೆ ಗರಿಷ್ಠ 5.00 ಲಕ್ಷ ರೂ.ಗಳ ಸಹಾಯಧನ ನೀಡುವ ಯೋಜನೆಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಯೋಜನೆಗೆ ರಾಯಚೂರು ಜಿಲ್ಲೆಗೆ ನಿಗಧಿಪಡಿಸಿರುವ ಪರಿಶಿಷ್ಟ ಜಾತಿಯ 06 ಮತ್ತು ಪರಿಶಿಷ್ಟ ಪಂಗಡದ 04 ಒಟ್ಟು 10 ಅಭ್ಯರ್ಥಿಗಳ ಗುರಿ ಹಾಗೂ ಮಾರ್ಗಸೂಚಿಗಳನ್ವಯ ಅರ್ಹವಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರವಾಸೋದ್ಯಮ ಇಲಾಖೆಯ ಸೂಚನಾ ಫಲಕದಲ್ಲಿ ಪ್ರದರ್ಶಿಸಲಾಗಿದೆ. ಈ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಜುಲೈ 14ರೊಳಗಾಗಿ ಲಿಖಿತ ರೂಪದಲ್ಲಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ನೆಲಮಹಡಿ, ಜಿಲ್ಲಾಡಳಿತ ಭವನ, ಯಕ್ಲಾಸಪುರ ರಾಯಚೂರು 584101 ಇವರಿಗೆ ಕಚೇರಿಯ ವೇಳೆ ಸಂಪರ್ಕಿಸಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

**ರಾಯಚೂರು ಜುಲೈ 01:** ಮೀನುಗಾರಿಕೆ ಇಲಾಖೆಯಿಂದ 2026-27ನೇ ಸಾಲಿಗೆ ರಾಜ್ಯ ವಲಯ ಯೋಜನೆಯಡಿ ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯಡಿ ಬಾಕಿ ಉಳಿದ ಗುರಿಗಳಂತೆ ಮೀನು ಕೃಷಿ ಕೊಳಗಳ ನಿರ್ಮಾಣ, ಸರ್ಕಾರಿ ಕೆರೆಗಳಲ್ಲಿ ಬಿತ್ತನೆ ಮಾಡಲು ಖರೀದಿಸಿದ ಮೀನುಮರಿ ಖರೀದಿಗೆ ಸಹಾಯಧನ, ಸರ್ಕಾರಿ ಕೆರೆಗಳನ್ನು ಗುತ್ತಿಗೆ/ಟೆಂಡರ್‌ನಲ್ಲಿ ಪಡೆದ ಫಲಾನುಭವಿಗಳಿಗೆ ಕೆರೆ ಅಂಚಿನಲ್ಲಿ ಮೀನುಕೃಷಿ ಕೊಳ ನಿರ್ಮಾಣಕ್ಕಾಗಿ ಸಹಾಯಧನ, ನದಿಭಾಗಗಳಲ್ಲಿ ಮೀನು ಹಿಡಿಯಲು ಮೀನುಗಾರಿಕೆ ಇಲಾಖೆಯಿಂದ ಅಧಿಕೃತ ಪರವಾನಿಗೆ ಪಡೆದ ಫಲಾನುಭವಿಗಳಿಗೆ ಹಾಗೂ ಮೀನುಗಾರರ ಸಹಕಾರ ಸಂಘಗಳ ಸದಸ್ಯರುಗಳಿಗೆ ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ ಯೋಜನೆ ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ವಲಯ ಯೋಜನೆಯಡಿ ವಿಶೇಷ ಘಟಕ/ಗಿರಿಜನ ಉಪಯೋಜನೆಗಳಡಿ ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ ಯೋಜನೆ, ಮೀನುಗಾರರ ಸಹಕಾರ ಸಂಘದ ಸದಸ್ಯರಿಗೆ ಮೀನು ಮಾರಾಟಕ್ಕಾಗಿ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಗೆ ಸಹಾಯಧನವನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಮೀನುಗಾರರ ಸಹಕಾರ ಸಂಘಗಳು, ಮೀನುಗಾರರು, ಮೀನು ಕೃಷಿಕರು ಮತ್ತು ಸಾರ್ವಜನಿಕರು ಪಡೆದುಕೊಳ್ಳಬಹುದಾಗಿದ್ದು, ಅರ್ಜಿ ಸಲ್ಲಿಸುವ ಬಗ್ಗೆ ಹಾಗೂ ಯೋಜನೆಗಳ ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ರಾಯಚೂರು ಮೊ. 8050196667 ಹಾಗೂ ಮೀನುಗಾರಿಕೆ ಸಹಾಯಕ ನಿರ್ದೇಶಕರು ಸಿಂಧನೂರು, ಲಿಂಗಸೂಗೂರು ಮೊ. 9110878145 ಅಥವಾ ಜಿಲ್ಲಾ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್ ಐ ಆರ್ ಪ್ರಕ್ರಿಯೆ ಮೊದಲ ದಿನ ಬಳ್ಳಾರಿ ರಾಜ್ಯದಲ್ಲಿಯೇ ಎರಡನೇ ಸ್ಥಾನ



**ಬಳ್ಳಾರಿ, ಜು.01:** ನಿನ್ನೆಯಿಂದ ಆರಂಭವಾಗಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆಯಲ್ಲಿ ಮತದಾರರಿಗೆ ಎನ್ಯುಮರೇಷನ್ ಫಾರಂ ನೀಡಿ ಅವನ್ನು ತುಂಬಿಸಿ, ಡಿಜಿಟಲ್ ಮಾಡಿ ಅಪ್ ಲೋಡ್ ಮಾಡುವುದರಲ್ಲಿ ಮೊದಲ ದಿನ ಬಳ್ಳಾರಿ ಜಿಲ್ಲೆ ರಾಜ್ಯದಲ್ಲಿಯೇ ಎರಡನೇ ಸ್ಥಾನ ಪಡೆದಿದೆಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರಪ್ರಸಾದ್ ಹೇಳಿದ್ದಾರೆ.

ಸಂಜೆವಾಣಿಯೊಂದಿಗೆ ಮಾತನಾಡಿದ ಅವರು ಈ ಕುರಿತು ವಿವರಣೆ ನೀಡಿ, ಈ ಪ್ರಕ್ರಿಯೆಯಲ್ಲಿ ರಾಯಚೂರು ಜಿಲ್ಲೆ 15750 ಮತದಾರರ ಹೆಸರು ಡಿಜಿಟಲ್ ಮೂಲಕ ಅಪ್ ಲೋಡ್ ಮಾಡಿ ಮೊದಲ ಸ್ಥಾನದಲ್ಲಿದ್ದರೆ. ಬಳ್ಳಾರಿ ಜಿಲ್ಲೆ 8059 ಮತದಾರರ ಹೆಸರು ಡಿಜಿಟಲ್ ಮಾಡಿದೆ. ಕೊಡುಗು ಜಿಲ್ಲೆ ಕೇವಲ 163 ಮಾಡುವ ಮೂಲಕ ಕೊನೆ ಸ್ಥಾನದಲ್ಲಿದೆ.

ಇನ್ನು ಎನ್ಯುಮರೇಷನ್ ಅರ್ಜಿಗಳನ್ನು ಮತದಾರರಿಗೆ ವಿತರಿಸುವಲ್ಲಿ ಹಾಸನ. 204110 ಅರ್ಜಿ ವಿತರಿಸಿ ಮೊದಲ ಸ್ಥಾನದಲ್ಲಿದ್ದರೆ. ಬಳ್ಳಾರಿ 41774 ವಿತರಿಸಿ 19 ನೇ ಸ್ಥಾನದಲ್ಲಿದೆ. ಕೊಡಗು 8670 ವಿತರಿಸಿ ಕೊನೆ ಸ್ಥಾನದಲ್ಲಿದೆ. ಈ ತಿಂಗಳ 29 ರ ವರೆಗೆ ಈ ಪ್ರಕ್ರಿಯೆ ನಡೆಯಲಿದೆ.

ಮೊದಲ ದಿನವಾದ್ದರಿಂದ ಒಂದಿಷ್ಟು ಕೆಲ ಅಡೆ ತಡೆಗಳು ಎದುರಾಗಿವೆ ಅವನ್ನು ಪರಿಹರಿಸಿಕೊಂಡು ಇನ್ನಷ್ಟು ವೇಗ ಪಡೆಯಲಿದೆಂದು ಎಡಿಸಿ ಮಹಮ್ಮದ್ ಝುಬೇರ್ ಅವರು ಹೇಳಿದ್ದು. ಮನೆ ಮನೆಗೆ ಬರುವ ಬಿಎಲ್ ಓ ಗಳಿಗೆ ಮತದಾರರು ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು ಎಂದಿದ್ದಾರೆ.

# ದಲಿತರ ಮೇಲಿನ ಹಲ್ಲೆ ಹಾಗೂ ದೌರ್ಜನ್ಯ ಖಂಡನೀಯ: ಮುತ್ತಣ್ಣ ಮೇತ್ರಿ




**ಜಮಖಂಡಿ, ಜು 1:** ಕೊಪ್ಪಳ ಜಿಲ್ಲೆಯ ಬೋಚನಹಳ್ಳಿ ಗ್ರಾಮದಲ್ಲಿ ದಲಿತ ಸಮುದಾಯದವರ ಮೇಲೆ ನಡೆದಿರುವ ಹಲ್ಲೆ ಹಾಗೂ ದೌರ್ಜನ್ಯ ಪ್ರಕರಣವನ್ನು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ಬಾಗಲಕೋಟೆ ಜಿಲ್ಲಾ ಸಮಿತಿ ತೀವ್ರವಾಗಿ ಖಂಡಿಸಿದ್ದು, ಘಟನೆಯಲ್ಲಿ ಭಾಗಿಯಾಗಿರುವ ಆರೋಪಿಗಳನ್ನು ಕೂಡಲೇ ಬಂಧಿಸಿ ಸಂತ್ರಸ್ತರಿಗೆ ನ್ಯಾಯ ಒದಗಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಬಾಗಲಕೋಟೆ ಜಿಲ್ಲಾ ಸಂಚಾಲಕ ಮುತ್ತಣ್ಣ ಮೇತ್ರಿ, ಬೋಚನಹಳ್ಳಿ ಗ್ರಾಮದಲ್ಲಿ ಹಿಂದೂ–ಮುಸ್ಲಿಮರು ಒಗ್ಗೂಡಿ ಆಚರಿಸುವ ಮೊಹರಂ ಸಂದರ್ಭದಲ್ಲಿ ನಡೆದ ಘಟನೆಯನ್ನು ನೆಪವನ್ನಾಗಿ ಮಾಡಿಕೊಂಡು ದಲಿತ ಸಮುದಾಯದವರ ಮೇಲೆ ಹಲ್ಲೆ ನಡೆಸಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.

ಘಟನೆಯ ಬಳಿಕ ಸ್ಥಳೀಯ ದಲಿತ ಮುಖಂಡರು ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡಿ ಮಾಹಿತಿ ಸಂಗ್ರಹಿಸಿದ್ದು, ಮಾತಿನ ಚಕಮಕಿಯ ಬಳಿಕ ಕೆಲವರು ದಲಿತ ಕೇರಿಗೆ ನುಗ್ಗಿ ಮಹಿಳೆಯರು, ಮಕ್ಕಳು ಹಾಗೂ ಇತರರ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದೆ ಎಂದು ಅವರು ಹೇಳಿದ್ದಾರೆ.

ಬೋಚನಹಳ್ಳಿ ಗ್ರಾಮದಲ್ಲಿ ದಲಿತರ ಮೇಲೆ ಈ ಹಿಂದೆಯೂ ಹಲ್ಲೆ ಹಾಗೂ ದೌರ್ಜನ್ಯಗಳು ನಡೆದಿರುವ ಮಾಹಿತಿ ಲಭ್ಯವಾಗಿದ್ದು, ಗ್ರಾಮದಲ್ಲಿ ಅಸ್ಪೃಶ್ಯತೆಯ ಆಚರಣೆಗಳು ಇನ್ನೂ ಜೀವಂತವಾಗಿರುವುದು ವಿಷಾದನೀಯ ಸಂಗತಿ ಎಂದು ಅವರು ತಿಳಿಸಿದ್ದಾರೆ. ಸವರ್ಣೀಯರ ಓಣಿಯ ಚರಂಡಿ ನೀರು ದಲಿತ ಕೇರಿಗೆ ಹರಿದು ಅನಾರೋಗ್ಯಕರ ಪರಿಸ್ಥಿತಿ ನಿರ್ಮಾಣವಾಗಿರುವುದು ಸಾಮಾಜಿಕ ಅಸಮಾನತೆಯ ಪ್ರತೀಕವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಕೆಲವರ ತಪ್ಪಿಗಾಗಿ ಇಡೀ ದಲಿತ ಸಮುದಾಯವನ್ನು ಗುರಿಯಾಗಿಸಿಕೊಂಡು ಮಹಿಳೆಯರು, ಮಕ್ಕಳು ಹಾಗೂ ವೃದ್ಧರ ಮೇಲೆಯೂ ಜಾತಿ ನಿಂದನೆ, ದೈಹಿಕ ಹಲ್ಲೆ ಹಾಗೂ ದೌರ್ಜನ್ಯ ನಡೆಸುವುದು ಖಂಡನೀಯ. ಇಂತಹ ಘಟನೆಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತ ವಿಫಲವಾಗಿದೆ ಎಂದು ಅವರು ದೂರಿದ್ದಾರೆ.

ಸ್ಥಳೀಯರ ಆರೋಪದಂತೆ ಈ ಘಟನೆಯಲ್ಲಿ ವಿವಿಧ ಸಮುದಾಯಗಳ ಕೆಲವರು ಭಾಗಿಯಾಗಿದ್ದಾರೆ ಎನ್ನಲಾಗಿದ್ದು, ಈ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಇತ್ತೀಚಿನ ದಿನಗಳಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರ ಮೇಲೆಯೇ ಪ್ರತಿದೂರು ದಾಖಲಿಸುವ ಪ್ರವೃತ್ತಿ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇದರಿಂದ ಸಂತ್ರಸ್ತರಲ್ಲಿ ಭಯದ ವಾತಾವರಣ ನಿರ್ಮಾಣವಾಗುತ್ತಿದ್ದು, ಈ ಪ್ರವೃತ್ತಿಗೆ ಸರ್ಕಾರ ತಕ್ಷಣ ಕಡಿವಾಣ ಹಾಕಬೇಕು ಎಂದು ಅವರು ಆಗ್ರಹಿಸಿದ್ದಾರೆ.

ರಾಜ್ಯ ಸರ್ಕಾರವು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರನ್ನು ಬಂಧಿಸಲು, ನಿಷ್ಪಕ್ಷಪಾತ ತನಿಖೆ ನಡೆಸಲು, ಸಂತ್ರಸ್ತರಿಗೆ ಸೂಕ್ತ ರಕ್ಷಣೆ ಹಾಗೂ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಮುತ್ತಣ್ಣ ಮೇತ್ರಿ ಪತ್ರಿಕಾ ಪ್ರಕಟಣೆ ಮೂಲಕ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪದಾಧಿಕಾರಿಗಳಾದ ಆನಂದ ದೊಡಮನಿ, ಕೃಷ್ಣಮೂರ್ತಿ ನಾಯ್ಕರ, ಸಂಗಣ್ಣ ಮಡ್ಡಿ, ಅರ್ಜುನ ದೊಡಮನಿ, ಚಂದ್ರು ಹರಿಜನ, ಲಕ್ಷ್ಮಣ ಹರಿಜನ, ಮಾರುತಿ ಮರೆಗುದ್ದಿ ಹಾಗೂ ಆನಂದ ಕಾಂಬಳೆ ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಕುಡಿಯುವ ನೀರಿನ ಸಮಸ್ಯೆ ಪರಿಶೀಲನೆ

**ಆಳಂದ:ಜು.1:** ತಾಲೂಕಿನ ಖಜೂರಿ ಗ್ರಾಮದ ಇಂದಿರಾ ಗಾಂಧಿ ವಸತಿ ಶಾಲೆಗೆ ರಾಜ್ಯದ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ, ಶಾಸಕ ಬಿ.ಆರ್.ಪಾಟೀಲ್ ಅವರು ಭೇಟಿ ನೀಡಿ, ಶಾಲೆಯಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಸ್ಥಳದಲ್ಲೇ ಪರಿಶೀಲಿಸಿದರು.

ಶಾಲಾ ಮುಖ್ಯೋಪಾಧ್ಯಾಯರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳೊಂದಿಗೆ ಚರ್ಚಿಸಿದ ಶಾಸಕರು, ಸಮಸ್ಯೆಯ ಸಂಪೂರ್ಣ ಮಾಹಿತಿ ಪಡೆದುಕೊಂಡರು. ನೀರಿನ ಸರಬರಾಜಿನಲ್ಲಿ ಉಂಟಾಗಿದ್ದ ತೊಂದರೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು, ಶೀಘ್ರದಲ್ಲೇ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

ಈ ನಡುವೆ, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ತಾತ್ಕಾಲಿಕವಾಗಿ ಪರ್ಯಾಯ ನೀರಿನ ವ್ಯವಸ್ಥೆ ಕಲ್ಪಿಸುವಂತೆಯೂ ಕ್ರಮ ಕೈಗೊಳ್ಳಲು ಶಾಸಕರು ಸೂಚನೆ ನೀಡಿದರು. ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿ ದೊರೆಯುವಂತೆ ಸಂಬಂಧಿಸಿದ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ, ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸುವ ಭರವಸೆಯನ್ನು ಶಾಸಕ ಪಾಟೀಲ್ ನೀಡಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಡಿಸಿಸಿ ಬ್ಯಾಂಕ್ ನಿರ್ದೇಶಕ ಅಶೋಕ ಸಾವಳೇಶ್ವರ ಖಜೂರಿ ಇಂಧಿರಾ ವಸತಿ ಶಾಲೆ ಸೇರಿದಂತೆ ಇತರ ಸರ್ಕಾರಿ ಶಾಲೆ ಮತ್ತು ಪಿಯು



ಕಾಲೇಜಿನಲ್ಲಿನ ಸಮಸ್ಯೆ, ಸಿಬ್ಬಂದಿಗಳ ಕೊರತೆ ಸೇರಿ ಮೂಲಸೌಲಭ್ಯಗಳ ಪೂರೈಕೆಗೆ ಶಾಸಕರ ಗಮನಕ್ಕೆ ತಂದರು.

ಈ ವೇಳೆ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಶಿವಪುತ್ರಪ್ಪಾ ಪಾಟೀಲ, ಭೀಮರಾವ್ ಢಗೆ, ಪಿಕೆಪಿಎಸ್ ಅಧ್ಯಕ್ಷ ಶರಣಪ್ಪ ಢಗೆ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಸಚಿವರ ಅಧ್ಯಕ್ಷರ ಹೆಸರಲ್ಲಿ ಬುಡಾದಲ್ಲಿ ಲಂಚ ಕೇಳ್ತಾರೆಂಬ ಆರೋಪ

**ಬಳ್ಳಾರಿ, ಜು.01:** ಇಲ್ಲಿನ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ( ಬುಡಾ)ದಲ್ಲಿ ಸಂಬಂಧಿಸಿದ ಸಚಿವರು, ಬುಡಾ ಅಧ್ಯಕ್ಷರ ಹೆಸರಲ್ಲಿ ಬುಡಾ ಅಧಿಕಾರಿಗಳು, ಸಿಬ್ಬಂದಿ ಲಂಚ ಕೇಳ್ತಾರೆ ಎಂದು ರಿಯಲ್ ಎಸ್ಟೇಟ್ ಉದ್ಯಮಿ ಈರೇಶಿ ಆರೋಪಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಇಂದು ಸುದ್ದಿಗೋಷ್ಟಿ ನಡೆಸಿದ ಅವರು ಕಳೆದ 20 ವರ್ಷಗಳಿಂದ ನಾನು ನಗರದಲ್ಲಿ ರಿಯಲ್ ಎಸ್ಟೇಟ್ ಉದ್ಯಮದಲ್ಲಿ ಇದ್ದೇನೆ. ಈ ಹಿಂದೆ ಈ ರೀತಿ ಇರಲಿಲ್ಲ. ಈಗ್ಗೆ ಕೆಲ ವರ್ಷಗಳಿಂದ ಈ ಲಂಚದ ಬೇಡಿಕೆ ಹೆಚ್ಚಾಗಿದೆ. ಈ ಹಿಂದೆ ಅಗತ್ಯ ದಾಖಲೆ ನೀಡಿದರೆ ನನಗಂತೂ ಕೆಲಸ ಮಾಡಿಕೊಡುತ್ತಿದ್ದರು. ಈಗ ಲಂಚ ಇಲ್ಲದೆ ಯಾವುದೇ ಪೈಲ್ ಮೂ ಮಾಡಲ್ಲ. ಎಲ್ಲಾ ದಾಖಲೆ ಇದ್ದರೂ ಏನಾದರೊಂದು ಕೊಕ್ಕೆ ಹಾಕುತ್ತಾರೆ. ಲಂಚ ಕೊಟ್ಟರೆ ಸರಿ ದಾಖಲೆ ಇರದಿದ್ದರೂ ಕೆಲಸ ತಕ್ಷಣ ಆಗುತ್ತೆ.

ಇದಕ್ಕೆ ಬೇಸತ್ತು ಈ ಹಿಂದೆ 2024 ರಲ್ಲಿ20 ಎಕರೆ ಲೇಔಟ್ ಗೆ ಅನುಮತಿ ನೀಡಲು 23 ವರೆ ಲಕ್ಷ ಹಣ ಕೇಳಿದ್ದರು. ಆಗ ಲೋಕಾಯುಕ್ತಕ್ಜೆ ದೂರು ನೀಡಿ ಆಯುಕ್ತರಾದಿಯಾಗಿ ಆರು ಜನ ಅಮಾನತ್ ಆಗಿದ್ದರೂ.

ಆದರೂ ಇಲ್ಲಿನ ಲಂಚಾವತಾರ ಮಾತ್ರ ಕಡಿಮೆ ಆಗುತ್ತಿಲ್ಲ. ಸರ್ಕಾರಕ್ಕೆ ನೀಡಬೇಕಾದ ಶುಲ್ಕಕ್ಕಿಂತ ಇವರ ಲಂಚದ ಹಣ ದುಪ್ಪಟ್ಟಾಗಿರುತ್ತೆ. ಬೇಸತ್ತು ಒತ್ತೀಗೆ ಎರೆಡುವರೆ ಎಕರೆ ಲೇಔಟ್ ಗೆ 3.5 ಲಕ್ಷ ಲಂಚ ಕೇಳಿದ್ದಕ್ಕೆ ಮತ್ತೆ ಲೋಕಸಯುಕ್ತಕ್ಕೆ ದೂರು ನೀಡಿ ಬಯಡಾ ಸರ್ವೇಯರ್ ಶಾಂತಮೂರ್ತಿ ಮೇಲೆ ದೂರು ದಾಖಲಿಸುವಂತೆ ಮಾಡಿರುವೆ.

ಸಚಿವರು, ಅಧ್ಯಕ್ಷರಿಗೆ ಲಂಚ ಕೊಡಬೇಕು ಎಂಬ ಆಡಿಯೋ ನೀಡಿದ ಅವರು. ಇದರಿಂದಾಗಿ ನನ್ನನ್ನು ಅಧಿಕಾರಿಗಳು ಶತ್ರುಗಳಂತೆ ಕಾಣುತ್ತಿದ್ದಾರೆ. ಅವರು ತೊಂದರೆ ಕೊಡುವ ಸಾಧ್ಯತೆ ಇದೆ. ನನ್ನ ವ್ಯವಹಾರಕ್ಕೂ ಅಡ್ಡಿಪಡಿಸುವ ಹುನ್ನಾರ ಮಾಡಬಹುದು. ಆದರೂ ಭ್ರಷ್ಟಾಚಾರದ ವಿರುದ್ದ ನನ್ನ ಹೋರಾಟ ನಿಲ್ಲದು ಎಂದಿದ್ದಾರೆ.

ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರು ಲಂಚ ರಹಿತ ಆಡಳಿತ ಎನ್ನುತರೆ. ಇಲ್ಲಿ ಮಾತ್ರ ಲಂಚ ಇಲ್ಲದೆ ಕೆಲಸ ಆಗಲ್ಲ. ಇದೊಂದೇ ಕಚೇರಿ ಅಲ್ಲ ಇತರೇ ಕಚೇರಿಗಳಲ್ಲೂ ಇದೇ ಪರಿಸ್ಥಿತಿ ಇದೆ ಎಂದು ಆರೋಪಿಸಿದರು.

ಬುಡಾ ಅಧ್ಯಕ್ಷರ ಹೆಸರೇಳಿ ಹಣ ಕೇಳುತ್ತಿದ್ದರೆ. ಈ ವಿಷಯವನ್ನು ಅವರ ಗಮನಕ್ಕೆ ತಂದಿದ್ದೀರ ಎಂಬ ಪ್ರಶ್ನೆಗೆ ಇಲ್ಲ.ತರಲಿಲ್ಲ ಇನ್ನು ಮುಂದೆ ತರುವೆ ಎಂದರು.

ಆಡಿಯೋದಲ್ಲಿ ಶಾಸಕರದ್ದು ಬೇರೆ, ಸಚಿವರದ್ದು ಬೇರೆ, ಅಧ್ಯಕ್ಷರದ್ದು ಕೊಡಬೇಕು ಎಂಬ ಅಸ್ಪಷ್ಟವಾದ ಮಾತುಗಳು ಕೇಳಿಬರುತ್ತಿವೆ. ಒಟ್ಟಾರೆ ಬುಡಾದಿಂದ ಒಂದು ಲೇಔಟ್ ಮಾಡಲು ಹತ್ತಾರು ವರ್ಷ ಆದರೂ ಆಗದಿದ್ದರೂ, ಲಂಚ ವಿಷಯದಲ್ಲಿ ಮಾತ್ರ ಆಗಾಗ್ಗೆ ಸುದ್ದಿಮಾಡುತ್ತಲೇ ಇದೆ.

# ಅಧಿಕ ದರಕ್ಕೆ ರಸಗೊಬ್ಬರ ಮಾರಾಟ ಆರೋಪ; ಕೃಷಿ ಇಲಾಖೆಯಿಂದ ನೋಟಿಸ್

**ಯಾದಗಿರಿ :ಜು.1:** ನಿಗದಿತ ಗರಿಷ್ಠ ಚಿಲ್ಲರೆ ದರ (ಎಂಆರ್‌ಪಿ)ಗಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ನಡೆಸಿರುವ ಆರೋಪದ ಹಿನ್ನೆಲೆಯಲ್ಲಿ ಸೈದಾಪುರ ಪಟ್ಟಣದ ಶ್ರೀ ಲಕ್ಷ್ಮೀ ವೆಂಕಟೇಶ್ವರ ಟ್ರೇಡರ್ಸ್‌ಗೆ ಕೃಷಿ ಇಲಾಖೆ ನೋಟಿಸ್ ಜಾರಿಗೊಳಿಸಿದೆ.




ಕರ್ನಾಟಕ ರಾಜ್ಯ ರೈತ ಸಂಘದ ಬಳಿಚಕ್ರ ಹೋಬಳಿ ಅಧ್ಯಕ್ಷ ಎಸ್.ಎಂ. ಹಣಮಂತ ನಾಯಕ ಅವರು ಸಲ್ಲಿಸಿದ ಲಿಖಿತ ದೂರಿನ ಆಧಾರದ ಮೇಲೆ ಕೃಷಿ ಇಲಾಖೆ ಈ ಕ್ರಮ ಕೈಗೊಂಡಿದೆ. ದೂರಿನಲ್ಲಿ ಜೂನ್ 27ರಂದು ಕೆಲವು ರಸಗೊಬ್ಬರಗಳನ್ನು ನಿಗದಿತ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಲಾಗಿದೆ ಎಂದು ದಾಖಲೆಗಳೊಂದಿಗೆ ಆರೋಪಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಿತ ಸಂಸ್ಥೆಗೆ ಎರಡು ದಿನಗಳೊಳಗೆ ಲಿಖಿತ ಸಮಜಾಯಿಷಿ ಸಲ್ಲಿಸುವಂತೆ ಕೃಷಿ ಇಲಾಖೆ ಸೂಚಿಸಿದ್ದು, ನಿಗದಿತ ಅವಧಿಯಲ್ಲಿ ಉತ್ತರ ಸಲ್ಲಿಸದಿದ್ದಲ್ಲಿ ಲಭ್ಯ ದಾಖಲೆಗಳ ಆಧಾರದ ಮೇಲೆ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಇದೇ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಂಟಿ ಕೃಷಿ ನಿರ್ದೇಶಕರಿಗೆ ಸಲ್ಲಿಸಿರುವ ಮತ್ತೊಂದು ಮನವಿಯಲ್ಲಿ, ಬಳಿಚಕ್ರ ಗ್ರಾಮದ ವಿಶ್ವಾರಾಧ್ಯ ಆಗ್ರೋ ಏಜೆನ್ಸಿ ಹಾಗೂ ಕಿಲ್ಲನಕೇರಾ ಗ್ರಾಮದ ಪಟೇಜರ್ ಅಂಗಡಿ ವಿರುದ್ಧ ಯೂರಿಯಾ ಗೊಬ್ಬರ ಕಳ್ಳಸಾಗಣೆ, ಕಳಪೆ ಗುಣಮಟ್ಟದ ಭತ್ತದ ಬೀಜಗಳ ಮಾರಾಟ ಮತ್ತು ಜಿಎಸ್‌ಟಿ ಬಿಲ್ ನೀಡದೆ ವ್ಯವಹಾರ ನಡೆಸುತ್ತಿರುವ ಆರೋಪಗಳನ್ನು ಮಾಡಲಾಗಿದೆ.

ಕೆಲವು ರೈತರು ಖರೀದಿಸಿದ ಭತ್ತದ ಬೀಜಗಳು ಸಮರ್ಪಕವಾಗಿ ಮೊಳಕೆಯೊಡೆಯದೆ ನಷ್ಟ ಉಂಟಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದ್ದು, ಸಂಬಂಧಿತ ಅಂಗಡಿಗಳ ವಿರುದ್ಧ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಸಂಘಟನೆ ಆಗ್ರಹಿಸಿದೆ.

ಈ ಕುರಿತು ಸಂಬಂಧಿತ ವ್ಯಾಪಾರ ಸಂಸ್ಥೆಗಳ ಪ್ರತಿಕ್ರಿಯೆ ಇನ್ನೂ ಲಭ್ಯವಾಗಿಲ್ಲ. ಕೃಷಿ ಇಲಾಖೆಯ ತನಿಖೆ ಪೂರ್ಣಗೊಂಡ ಬಳಿಕ ಆರೋಪಗಳ ಸತ್ಯಾಸತ್ಯತೆ ಸ್ಪಷ್ಟವಾಗುವ ನಿರೀಕ್ಷೆಯಿದೆ.

ಜಂಟಿ ಕೃಷಿ ನಿರ್ದೇಶಕರಿಗೆ ಮನವಿ ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರಾದ ಸಾಬಣ್ಣ ಬಳಿಚಕ್ರ ಹಾಗೂ ಮಲ್ಲಯ್ಯ ಬಳಿಚಕ್ರ ಉಪಸ್ಥಿತರಿದ್ದರು.

# ಮೊಹರೀರ್‌ಗೆ ಗೌರವ ಡಾಕ್ಟರೇಟ್ ಪ್ರದಾನ

**ಕಲಬುರಗಿ: ಜು.1:**ಬೆಂಗಳೂರಿನ ಹೊಸೂರಿನಲ್ಲಿರುವ ಟಿಜಿಐ ಗ್ರ್ಯಾಂಡ್ ಫಾರ್ಚುನಾ ಸಭಾಂಗಣದಲ್ಲಿ ಶನಿವಾರ ನಡೆದ ಏಷಿಯಾ ಇಂಟರ್‌ನ್ಯಾಷನಲ್ ಕಲ್ಚರ್ ಅಕಾಡೆಮಿ ಘಟಿಕೋತ್ಸವದಲ್ಲಿ ಕಲಬುರಗಿಯ ರವೀಂದ್ರನಾಥ ವಿ. ಮೊಹರೀರ್ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ಚಿತ್ರಕಲಾ ರಂಗದಲ್ಲಿ ರವೀಂದ್ರನಾಥ ವಿ. ಮೊಹರೀರ್ ಅವರು ಮಾಡಿರುವ ಸಾಧನೆಯನ್ನು ಪರಿಗಣಿಸಿ ಡಾಕ್ಟರೇಟ್ ನೀಡಲಾಗಿದೆ ಎಂದು ಅಕಾಡೆಮಿಯ ಪ್ರಮುಖರು ತಿಳಿಸಿದರು. ಪದ್ಮಶ್ರೀ ಪುರಸ್ಕೃತರಾದ ಸುಶೀಲಮ್ಮ ಅವರು ಪದವಿ ಪ್ರದಾನ ಮಾಡಿದರು. ವಿಶ್ವವಿದ್ಯಾಲಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ನಿತ್ಯೋತ್ಸವ ಸಾಂಸ್ಕೃತಿಕ ಪ್ರತಿಷ್ಠಾನದ ಸಂಚಾಲಕಿ ಕು. ನಿತ್ಯಾ ಅವರು ಇದೇ ಸಂದರ್ಭದಲ್ಲಿ ರವೀಂದ್ರನಾಥ ಮೊಹರೀರ್ ಅವರಿಗೆ 'ನಿತ್ಯೋತ್ಸವ ಕನ್ನಡ ಸಿರಿ' ಪ್ರಶಸ್ತಿ ನೀಡಿ ಗೌರವಿಸಿದರು. ಶ್ರೀಮತಿ ವಂದನಾ ರ. ಮೊಹರೀರ, ಸಂಸ್ಕೃತಿ ಚಿಂತಕ, ಲೇಖಕ ಡಾ. ಗುರುರಾಜ ಪೊಶೆಟ್ಟಿಹಳ್ಳಿ ಉಪಸ್ಥಿತರಿದ್ದರು.



## ಸಿಸಿಬಿ ಪೊಲೀಸರ ಕಾರ್ಯಾಚರಣೆ: ಮೂವರ ಬಂಧನ2.60 ಲಕ್ಷ ರೂ.ಮೌಲ್ಯದ 2.ಕೆ.ಜಿ.600 ಗ್ರಾಂ.ಗಾಂಜಾ ವಶ



**ಕಲಬುರಗಿ,ಜು.1**–ಸಿಸಿಬಿ ಪೊಲೀಸರ ಕಾರ್ಯಾಚರಣೆ ನಡೆಸಿ ನಗರದ ಸಬ್ ಅರ್ಬನ್ ಪೊಲೀಸ್ ಠಾಣಾ ವ್ಯಾಪ್ತಿಯ ಕಾಕಡೆ ಚೌಕ್ ಹತ್ತಿರ ನಿಷೇದಿತ ಗಾಂಜಾ ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಬಂಧಿಸಿ 2,60,000/– ರೂಪಾಯಿ ಮೌಲ್ಯದ 2 ಕೆಜಿ, 600 ಗ್ರಾಂ.ನಿಷೇಧಿತ ಗಾಂಜಾವನ್ನು ಜಪ್ತಿ ಮಾಡಿದ್ದಾರೆ.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದಂತೆ ಡಿಸಿಪಿಗಳಾದ ಶಾಲೂ, ಪ್ರವೀಣ್ ಹೆಚ್.ನಾಯಕ್, ಸಿಸಿಬಿ ಘಟಕದ ಎಸಿಪಿ ಜೇಮ್ಸ್ ಮಿನೇಜಸ್ ಅವರ ಮಾರ್ಗದರ್ಶನದಲ್ಲಿ ಸಿಸಿಬಿ ಘಟಕದ ಪಿಐ ಅರುಣಕುಮಾರ ಅವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಮೃತ್ಯುಂಜಯ, ರಾಜಕುಮಾರ, ಪ್ರದೀಪ್, ಅಂಬಾಜಿ, ಅಶೋಕ ಕಟಕೆ, ನಾಗೇಂದ್ರ, ಶಿವಲಿಂಗ, ನಾಗರಾಜ ಅವರನ್ನು ಒಳಗೊಂಡ ತಂಡ ಕಾರ್ಯಾಚರಣೆ ನಡೆಸಿ ನಗರದ ಸಬ್–ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾಕಡೆ ಚೌಕ್ ಹತ್ತಿರವಿರುವ ಕಾಕಡೆ ನಗರದ ಸಮೀಪದ ಸಾರ್ವಜನಿಕ ಸ್ಥಳದಲ್ಲಿ ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿದ್ದ ಮಿಜಗುರಿಯ ಲದಾಫ್ ಬಸೀರ್ ಹಸನ್ ತಂದೆ ಹಸನ್ ಲದಾಫ್ (42), ಕಾಕಡೆ ಚೌಕ್‌ನ ಖುತುಬುದ್ದಿನ್ ತಂದೆ ಮೈಬೂಬ್ ಶೇಖ್ (50) ಮತ್ತು ಅಬ್ದುಲ್ ಗನಿ ತಂದೆ ಹಾಶೀಮ್ ಶೇಖ್ (41) ಎಂಬುವವರನ್ನು ಬಂಧಿಸಿ 2.20 ಲಕ್ಷ ರೂ.ಮೌಲ್ಯದ 2.ಕೆ.ಜಿ.,600 ಗ್ರಾಂ.ಗಾಂಜಾ, 2,100 ರೂ.ನಗದು ಮತ್ತು 2 ಕೀಪ್ಯಾಡ್ ಮೊಬೈಲ್ ವಶಪಡಿಸಿಕೊಂಡಿದ್ದಾರೆ.

ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

# ರೈತನ ಎಫ್.ಡಿ ಹಣ ಲಪಟಾಯಿಸಿದ: ಹೊರಂಡಿ ಪಿ.ಕೆ.ಪಿ.ಎಸ್ ಕಾರ್ಯದರ್ಶಿ ವಿರುದ್ಧ ಕ್ರಮ ಜರುಗಿಸಿ

**ಬೀದರ್: ಜು.1:**ಜಿಲ್ಲೆಯ ಕಮಲನಗರ ತಾಲೂಕಿನ ಹೊರಂಡಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ (ಪಿ.ಕೆ.ಪಿ.ಎಸ್) ರೈತನೊಬ್ಬನ ಕಷ್ಟದ ಕಮಾಯಿಯ 1,90,000 ರೂ. ಸ್ಥಿರ ಠೇವಣಿ (ಎಫ್.ಡಿ) ಹಣವನ್ನು ನಕಲಿ ಸಹಿ ಮಾಡಿ ಲಪಟಾಯಿಸಿರುವ ಗಂಭೀರ ಆರೋಪ ಕೇಳಿ ಬಂದಿದೆ. ಈ ಕುರಿತು ವಂಚನೆಗೊಳಗಾದ ರೈತ ನ್ಯಾಯ ಕೋರಿ ಅಪರ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದಾರೆ.

ಹೊರಂಡಿ ಗ್ರಾಮದ ನಿವಾಸಿ ಬಸವರಾಜ ತಂದೆ ಗುರುಬಸಪ್ಪ ಘಟ್ಟೆ ಎಂಬುವವರೇ ವಂಚನೆಗೊಳಗಾದ ರೈತ. ಇವರು ತಮ್ಮ ಹಲವು ವರ್ಷಗಳ ದುಡಿಮೆಯ 1,90,000 ರೂಪಾಯಿಗಳನ್ನು ದಿನಾಂಕ 26/12/2025 ರಂದು ಹೊರಂಡಿ ಪಿ.ಕೆ.ಪಿ.ಎಸ್ ಶಾಖೆಯಲ್ಲಿ ಒಂದು ವರ್ಷದ ಅವಧಿಗೆ ಎಫ್.ಡಿ (ರಸೀದಿ ಸಂಖ್ಯೆ 1149) ಮಾಡಿದ್ದರು.

ದುರದೃಷ್ಟವಶಾತ್, ಇವರ ಮಗ ಪ್ರಶಾಂತ ತಂದೆ ಬಸವರಾಜ ಅವರು ದಿನಾಂಕ 18/05/2026 ರಂದು ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದರು. ದುಡಿಯುವ ಮಗನನ್ನು ಕಳೆದುಕೊಂಡ ಬಸವರಾಜ ಅವರ ಕುಟುಂಬ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿತ್ತು. ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ, ಬಿತ್ತನೆ ಬೀಜ ಹಾಗೂ ರಸಗೊಬ್ಬರ ತರಲು ಹಣದ ಅಗತ್ಯವಿದ್ದ ಕಾರಣ, ತಮ್ಮ ಎಫ್.ಡಿ ಹಣವನ್ನು ಹಿಂಪಡೆಯಲು ಅವರು ನಿರ್ಧರಿಸಿದ್ದರು.

ದಿನಾಂಕ 23/06/2026 ರಂದು ಹೊರಂಡಿ ಪಿ.ಕೆ.ಪಿ.ಎಸ್ ಶಾಖೆಗೆ ತೆರಳಿ ತಮ್ಮ ಎಫ್.ಡಿ ರದ್ದುಪಡಿಸಿ ಹಣ ನೀಡುವಂತೆ ಕಾರ್ಯದರ್ಶಿ ಶಿವಕುಮಾರ ಅವರನ್ನು ಕೇಳಿದಾಗ ವಂಚನೆ ಪ್ರಕರಣ ಬೆಳಕಿಗೆ ಬಂದಿದೆ. "ಇಲ್ಲಿ ನಿಮ್ಮ ಹೆಸರಿನಲ್ಲಿ ಯಾವುದೇ ಎಫ್.ಡಿ ಇಲ್ಲ. ಆ ಹಣವನ್ನು ಆಗಲೇ ನಿಮ್ಮ ಮಗನಿಗೆ ನೀಡಲಾಗಿದೆ" ಎಂದು ಕಾರ್ಯದರ್ಶಿ ಉಡಾಫೆಯ ಉತ್ತರ ನೀಡಿದ್ದಾರೆ.

ಮಗ ಬದುಕಿದ್ದಾಗ ಎಫ್.ಡಿ ಹಣ ತೆಗೆದುಕೊಂಡ ಬಗ್ಗೆ ತಮಗೆ ಯಾವುದೇ ಮಾಹಿತಿ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಹಣ ಡ್ರಾ ಮಾಡಿರುವ ಬಗ್ಗೆ ದಾಖಲೆಗಳನ್ನು ತೋರಿಸುವಂತೆ ಬಸವರಾಜ ಪಟ್ಟು ಹಿಡಿದಿದ್ದಾರೆ. ದಾಖಲೆಗಳನ್ನು ಪರಿಶೀಲಿಸಿದಾಗ, ಅದರಲ್ಲಿ ಬಸವರಾಜ ಅವರ ನಕಲಿ ಸಹಿ ಮಾಡಿರುವುದು ಪತ್ತೆಯಾಗಿದೆ. ಮಗನ ಸಾವಿನ ಶೋಕದಲ್ಲಿರುವ ವೃದ್ಧ ತಂದೆಗೆ ಮಗನ ನೆಪವೊಡ್ಡಿಯೇ ಬ್ಯಾಂಕ್ ಸಿಬ್ಬಂದಿ ಕಟ್ಟು ಕಥೆ ಕಟ್ಟಿ ಈ ರೀತಿ ವಂಚಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.



"ನನ್ನ ಕಷ್ಟದ ಹಣವನ್ನು ನಕಲಿ ಸಹಿ ಮಾಡಿ, ಭ್ರಷ್ಟಾಚಾರ ನಡೆಸಿ ಲೂಟಿ ಮಾಡಿರುವ ಹೊರಂಡಿ ಪಿ.ಕೆ.ಪಿ.ಎಸ್ ಕಾರ್ಯದರ್ಶಿ ಶಿವಕುಮಾರ ಹಾಗೂ ಇದರಲ್ಲಿ ಶಾಮೀಲಾಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ನನ್ನ ಹಣವನ್ನು ನನಗೆ ಮರಳಿಸಿ ಕೊಡುವ ಮೂಲಕ ನ್ಯಾಯ ಒದಗಿಸಬೇಕು" ಎಂದು ಒತ್ತಾಯಿಸಿ ಬಸವರಾಜ ಅವರು ಅಪರ ಜಿಲ್ಲಾಧಿಕಾರಿಗಳಿಗೆ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳಿಗೆ (ಎಸ್ಪಿ) ಸೋಮವಾರ ರಂದು ದೂರು ಸಲ್ಲಿಸಿದ್ದಾರೆ. ದೂರಿನ ಪ್ರತಿಗಳನ್ನು ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕರಿಗೂ ರವಾನಿಸಲಾಗಿದೆ.

ಪೊಲೀಸ್ ಇಲಾಖೆ ಹಾಗೂ ಸಹಕಾರ ಇಲಾಖೆ ಅಧಿಕಾರಿಗಳು ಈ ಬಗ್ಗೆ ಯಾವ ರೀತಿಯ ತನಿಖೆ ನಡೆಸಿ ನೊಂದ ರೈತನಿಗೆ ನ್ಯಾಯ ಒದಗಿಸಲಿದ್ದಾರೆ ಕಾದು ನೋಡಬೇಕಿದೆ.

# ರೋಗಿಗಳು ವೈದ್ಯರಿಗೆ ದೇವರು : ಡಾ.ಕಾಮರೆಡ್ಡಿ



**ಕಲಬುರಗಿ** :ರೋಗಿಗಳು ನಮಗೆ ದೇವರ ರೂಪದಲ್ಲಿ ನೊಡುತ್ತಾರೆ ನಾವು ಕೂಡ ರೋಗಿಗೆ ಚಿಕಿತ್ಸೆ ನೀಡುವಾಗ ದೇವರ ರೂಪದಲ್ಲಿ ನೋಡಬೇಕು ಎಂದು ಕಾಮರಡ್ಡಿ ಆಸ್ಪತ್ರೆಯ ಮುಖ್ಯಸ್ಥ ಕಲಬುರಗಿ ಜಿಲ್ಲೆಯ ಖ್ಯಾತ ವೈದ್ಯರಾದ ಡಾ.ಎಸ್.ಬಿ. ಕಾಮರೆಡ್ಡಿ ಹೇಳಿದರು.

ನಗರದ ಕಾಮರಡ್ಡಿ ಆಸ್ಪತ್ರೆಯಲ್ಲಿರುವ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ರೋಗಿಗಳ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ಉದ್ಘಾಟಿಸಿ ಮಾತನಾಡಿ ರೋಗಿಗಳೊಂದಿಗೆ ವೈದ್ಯರು ಹೆಚ್ಚು ಹೊತ್ತು ಮಾತನಾಡಿದಷ್ಟು ಆತ್ಮವಿಶ್ವಾಸ ರೋಗಿಗಳಲ್ಲಿ ಬೆಳೆಯುತ್ತದೆ. ಕಾಯಿಲೆಯ ಬಗ್ಗೆ ವೈದ್ಯರಿಗೂ ಸ್ಪಷ್ಟತೆ ಸಿಗುತ್ತದೆ. ಇದರಿಂದಾಗಿ ಅಗತ್ಯ ಚಿಕಿತ್ಸೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ನೀಡಲು ಸಹಾಯವಾಗಲಿದೆ. ಹೀಗಾಗಿ, ರೋಗಿಗಳೊಂದಿಗೆ ವೈದ್ಯರು ಸಾಧ್ಯವಾದಷ್ಟು ನಿಖರ, ಮುಕ್ತವಾಗಿ ಸಂವಹನ ನಡೆಸಬೇಕು ಎಂದು ಹೇಳಿದರು.

ಕಾಮರಡ್ಡಿ ಆಸ್ಪತ್ರೆಯ ನಿರ್ದೇಶಕಿ ಡಾ. ಪ್ರತಿಮಾ ಕಾಮರಡ್ಡಿ ಮಾತನಾಡಿ ಇಂದು ಸಾರ್ವಜನಿಕರು ಎಲ್ಲಾ ಬಗೆಯ ಕಾಯಿಲೆ ಹಾಗೂ ವೈದ್ಯಕೀಯ ಚಿಕಿತ್ಸೆಯ ಬಗ್ಗೆ ಹೆಚ್ಚಿನ ಅರಿತಿದ್ದಾರೆ. ಎಲ್ಲವನ್ನೂ ಪ್ರಶ್ನಿಸುವುದು ಹಾಗೂ ತಿಳಿಯಲು ಬಯಸುತ್ತಾರೆ. ಗ್ರಾಮೀಣ ಪ್ರದೇಶದ ಜನರು ತಾವು ಅನುಭವಿಸುತ್ತಿರುವ ಸಂಕಟ ಮಾತ್ರ ತಿಳಿಸಿ, ರೋಗ ನಿರ್ಣಯ ಚಿಕಿತ್ಸೆ ಹೀಗೆ ಎಲ್ಲವೂ ವೈದ್ಯರ ಸೂಚನೆಯಂತೆಯೇ ಪಾಲಿಸಲು ಮುಂದಾಗುತ್ತಾರೆ. ಅವರಿಗೂ ಸಹ ಸಂಪೂರ್ಣ ಮಾಹಿತಿ ನೀಡಿ, ಆತ್ಮವಿಶ್ವಾಸ ಮೂಡಿಸಬೇಕು ಹಾಗೂ ಚಿಕಿತ್ಸೆಯ ಆಯ್ಕೆಗಳನ್ನು ಅವರಿಗೇ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಬಸವರಾಜಪ್ಪ ಕಾಮರಡ್ಡಿ ಡಾ.ಅಮರೇಶ ಬಿರಾದರ, ಡಾ.ನವಿನ ಬಿರಾದರ, ಸತಿಶ ಪಾಟೀಲ್, ಡಾ.ಸುನೀಲ್, ಶಂಕರಲಿಂಗ ಬಿ.ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಂಗವಿಕಲರ, ವಿಧವಾ ಹಾಗೂ ವೃದ್ಧಾಪ್ಯ ವೇತನದ ಆದಾಯ ಮಿತಿ 1.20 ಲಕ್ಷ ರೂ.ಗೆ ಹೆಚ್ಚಿಸಲು ಆಗ್ರಹ

**ಬೀದರ್:ಜು.1:** ಅಂಗವಿಕಲರು, ವಿಧವೆಯರು ಹಾಗೂ ವೃದ್ಧರ ಮಾಸಾಶನ ಪಡೆಯಲು ಇರುವ ಆದಾಯ ಮಿತಿಯನ್ನು 1,20,000 ರೂಪಾಯಿಗಳಿಗೆ ಹೆಚ್ಚಿಸಬೇಕು ಹಾಗೂ ಪ್ರತ್ಯೇಕ 'ಅಂಗವಿಕಲರ ಅಭಿವೃದ್ಧಿ ನಿಗಮ' ಸ್ಥಾಪಿಸಬೇಕು ಎಂದು ಆಗ್ರಹಿಸಿ 'ಕರ್ನಾಟಕ ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ನಿಗ್ರಹ ಸಮಿತಿ'ಯು ಸೋಮವಾರ ಬೀದರ್ ತಹಸೀಲ್ದಾರ್ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ರಾಜ್ಯ ಸರ್ಕಾರವು ಮಾಸಾಶನ ಪಡೆಯಲು 32,000 ರೂ.ಗಳ ಆದಾಯ ಮಿತಿಯನ್ನು ನಿಗದಿಪಡಿಸಿ ಆದೇಶ ಹೊರಡಿಸಿರುವುದರಿಂದ ಲಕ್ಷಾಂತರ ಫಲಾನುಭವಿಗಳಿಗೆ ತೀವ್ರ ತೊಂದರೆಯಾಗಿದೆ. ಈ ದಿಢೀರ್ ಆದೇಶದಿಂದಾಗಿ ಬಿಪಿ, ಶುಗರ್‌ನಂತಹ ಕಾಯಿಲೆಗಳಿಗೆ ಔಷಧಿ ಖರೀದಿಸಲು ಹಾಗೂ ದೈನಂದಿನ ಜೀವನ ಸಾಗಿಸಲು ಸಂಪೂರ್ಣವಾಗಿ ಮಾಸಾಶನವನ್ನೇ ಅವಲಂಬಿಸಿದ್ದ ವೃದ್ಧರು, ವಿಧವೆಯರು ಮತ್ತು ಅಂಗವಿಕಲರು ಪರದಾಡುವಂತಾಗಿದೆ. ಕಚೇರಿಯಿಂದ ಮನೆಗೆ, ಮನೆಯಿಂದ ಕಚೇರಿಗಳಿಗೆ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸಮಿತಿ ಕಳವಳ ವ್ಯಕ್ತಪಡಿಸಿದೆ.

ಆದ್ದರಿಂದ, ಸರ್ಕಾರ ಕೂಡಲೇ 32 ಸಾವಿರ ರೂ. ಆದಾಯ ಮಿತಿಯ ಆದೇಶವನ್ನು ರದ್ದುಗೊಳಿಸಿ, ಅದನ್ನು 1,20,000 ರೂ.ಗಳಿಗೆ ಹೆಚ್ಚಿಸಬೇಕು. ಇದರಿಂದ ನಿಜವಾದ ಅರ್ಹ ಫಲಾನುಭವಿಗಳಿಗೆ ಅನುಕೂಲವಾಗಲಿದೆ. ಇದರೊಂದಿಗೆ ರಾಜ್ಯ ಹಾಗೂ ಪ್ರತಿ ಜಿಲ್ಲಾ ಮಟ್ಟದಲ್ಲಿ 'ಅಂಗವಿಕಲರ ಅಭಿವೃದ್ಧಿ ನಿಗಮ'ವನ್ನು ಸ್ಥಾಪಿಸಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ. ಸಮಿತಿಯ ಈ ಮನವಿಯನ್ನು ಬೀದರ್ ತಹಸೀಲ್ದಾರ್ ಅವರ ಮುಖಾಂತರ ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರಿಗೆ ರವಾನಿಸಲಾಗಿದೆ.

ಸಮಿತಿಯ ಕಲ್ಯಾಣ ಕರ್ನಾಟಕ ಕಲಬುರಗಿ ವಿಭಾಗದ ಅಧ್ಯಕ್ಷರಾದ ಸಂಗಮೇಶ



ಭಾವಿದೊಡ್ಡಿ, ಅಂಗವಿಕಲ ಘಟಕದ ರಾಜ್ಯಾಧ್ಯಕ್ಷೆ ಮಂಗಲಾ ಮರ್ಕಲೆ, ಜಿಲ್ಲಾ ಕಾರ್ಯಾಧ್ಯಕ್ಷ ಶಿವಕುಮಾರ ಶಹಾಪೂರೆ, ಜಿಲ್ಲಾ ಕಾರ್ಯದರ್ಶಿ ಎಂ.ಡಿ. ಸಿರಾಜ್ ಹಾಗೂ ಸದಸ್ಯರುಗಳಾದ ಶ್ರೀಕಾಂತ ಡೋಣೆ, ಕವಿತಾ ಡೋಣೆ, ಜಗದೇವಿ, ವೀರಶೆಟ್ಟಿ ಕೌಡಗೆ, ಬೀರಗೊಂಡ, ಮತ್ತು ರಂಗಮ್ಮ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು

## ಸಾಲದ ಸಂಕಷ್ಟಕ್ಕೆ ಬಲಿಯಾದ ಯುವ ರೈತ



**ಆಳಂದ,ಜು.1**–ಸಾಲದ ಹೊರೆ ಹಾಗೂ ಸಾಲದಾತರ ಒತ್ತಡ ತಾಳಲಾರದೆ 19 ವರ್ಷದ ಯುವ ರೈತನೊಬ್ಬ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಆಳಂದ ತಾಲೂಕಿನ ಬೆಣ್ಣೆಶಿರೂರು ಗ್ರಾಮದಲ್ಲಿ ನಡೆದಿದೆ.

ಆತ್ಮಹತ್ಯೆಗೆ ಶರಣಾದ ಯುವ ರೈತನನ್ನು ಬೆಣ್ಣೆಶಿರೂರು ಗ್ರಾಮದ ಯಲ್ಲಾಲಿಂಗ ಬಂಡಗಾರ (19) ಎಂದು ಗುರುತಿಸಲಾಗಿದೆ.ಕುಟುಂಬದವರ ಮಾಹಿತಿ ಪ್ರಕಾರ, ಯಲ್ಲಾಲಿಂಗ ಕೃಷಿ ಚಟುವಟಿಕೆಗಳಿಗಾಗಿ ಸಮೀಪದ ಮಾಡ್ಯಾಳ ಗ್ರಾಮದ ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಿಂದ ಸುಮಾರು 1.35 ಲಕ್ಷ ರೂಪಾಯಿ ಕೃಷಿ ಸಾಲ ಪಡೆದಿದ್ದ. ಇದಲ್ಲದೆ, ಕೃಷಿ ವೆಚ್ಚ ಹಾಗೂ ಇತರೆ ಅಗತ್ಯಗಳಿಗಾಗಿ ಖಾಸಗಿಯಾಗಿ 5 ಲಕ್ಷ ರೂಪಾಯಿಗೂ ಅಧಿಕ ಸಾಲ ಮಾಡಿದ್ದ ಎನ್ನಲಾಗಿದೆ.

ಸಾಲ ಮರುಪಾವತಿಗಾಗಿ ಸಾಲದಾತರು ನಿರಂತರವಾಗಿ ಒತ್ತಡ ಹೇರಿದ್ದರಿಂದ ಯಲ್ಲಾಲಿಂಗ ಮಾನಸಿಕವಾಗಿ ತೀವ್ರ ನೊಂದಿದ್ದ. ಇದೇ ಕಾರಣದಿಂದ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ಕುಟುಂಬದವರು ಆರೋಪಿಸಿದ್ದಾರೆ.ಘಟನೆಯ ಮಾಹಿತಿ ತಿಳಿದು ನಿಂಬರ್ಗಾ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.ಇದೇ ವೇಳೆ, ಯುವ ರೈತನ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಿಸಾನ್ ಸಭಾ ಜಿಲ್ಲಾ ಅಧ್ಯಕ್ಷ ಭೀಮಶಂಕರ್ ಮಾಡ್ಯಾಳ್ ರಾಜ್ಯ ಸರ್ಕಾರವನ್ನು ತಕ್ಷಣ ಮಧ್ಯಪ್ರವೇಶಿಸಿ ಮೃತ ರೈತನ ಕುಟುಂಬಕ್ಕೆ 10 ಲಕ್ಷ ರೂಪಾಯಿ ಪರಿಹಾರ ನೀಡಬೇಕು ಹಾಗೂ ಕುಟುಂಬದ ಸದಸ್ಯರಿಗೆ ಅಗತ್ಯ ನೆರವು ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಕೊಳಗಲ್ಲು ಗ್ರಾಮದಲ್ಲಿ ಕುಡಿಯುವ ನೀರಿನ ಕೆರೆ ನಿರ್ಮಾಣಕ್ಕೆ ಆಗ್ರಹಿಸಿ ಧರಣಿ ಸತ್ಯಾಗ್ರಹ ಆರಂಭ




**ಬಳ್ಳಾರಿ, ಜು.01:** ತಾಲೂಕಿನ ಕೊಳಗಲ್ಲು ಗ್ರಾಮಸ್ಥರು ಕುಡಿಯುವ ನೀರು ಮತ್ತು ದೈನಂದಿನ ದಿನ ಬಳಳಕೆಯ ನೀರಿನ ತೀವ್ರ ಅಭಾವ ಎದುರುಸುತ್ತಿದ್ದುಕೂಡಲೇ ಗ್ರಾಮಕ್ಕೆ ಶಾಶ್ವತ ಕುಡಿಯುವ ನೀರಿನ ಕೆರೆ.ನಿರ್ಮಿಸಲು ಹಾಗೂ ಮೂಲ ಸೌಕರ್ಯ ಒದಗಿಸುವಂತೆ ಒತ್ತಾಯಿಸಿ ಡಿ.ವೈ.ಎಫ್.ಐಸಂಘಟನೆಯ ನೇತೃತ್ವದ ಇಂದು ಗ್ರಾಮದಲ್ಲಿ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಲಾಗಿದೆ.

ಸಂಘಟನೆಯ ಜಿಲ್ಲಾ ಅಧ್ಯಕ್ಷ ಯು.ಎರ್ರಿಸ್ವಾಮಿ, ಈ ಗ್ರಾಮದ ಜನರು ಹಲವು ವರ್ಷಗಳಿಂದ ಕುಡಿಯುವ ನೀರಿನ ಕೆರೆ ಸೇರಿದಂತೆ ವಿವಿಧ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ ಗ್ರಾಮದ ಸರ್ವೆ ನಂ 557.ರಲ್ಲಿ 296 ಎಕ್ಕರೆ ಕೆರೆ ಭೂಮಿಯಲ್ಲಿ ಕುಡಿಯುವ ನೀರಿನ ಕೆರೆ ನಿರ್ಮಿಸಲು.ಮತ್ತು 300.ಕ್ಕೂ ಹೆಚ್ಚು ಬಡ ಕುಟುಂಬಗಳು ನಿವೇಶನ ಮತ್ತು ವಸತಿ ಎದಿರಿಸುತ್ತಿದ್ದಾರೆ. ಮುಖ್ಯ ರಸ್ತೆಯನ್ನು ಅಗಲಿಕಾರಣ ಮಾಡಿ ಡಬಲ್ ರೋಡ್ ನಿರ್ಮಿಸಬೇಕು .

ಗ್ರಾಮ ದಿಂದ ಅಲ್ಲಿಪುರಕ್ಕೆ ಹೋಗುವ ರೋಡ್ಸಂಪೂರ್ಣ ಗುಂಡಿಬಿದ್ದು ಹಾಳಾಗಿ ದುಸ್ಥಿತಿಯಲ್ಲಿದ್ದು ಕೂಡಲೇ ಹೊಸರಸ್ತೆ ನಿರ್ಮಿಸಬೇಕುಸೇರಿದಂತೆ ಅನೇಕ ಬೇಡಿಕೆಗಳಿವೆಂದರು. ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ಸ್ಪಂದಿಸದೇ ನಿರ್ಲಕ್ಷ್ಯ ದೊರಣೆ ಮುಂದುವರೆದೆ ಕೊಳಗಲ್ಲು ಗ್ರಾಮದ ಎಲ್ಲಾ ರೈತರು, ಮಹಿಳೆಯರು,ಯುವ ಜನರು ಸೇರಿ ಡಿವೈಎಸ್ ಸಂಘಟನೆ ನೇತೃತ್ವದಲ್ಲಿ ವಿವಿಧ ರೀತಿಯ ಹೋರಾಟ ಮತ್ತು ಅನಿರ್ದಿಷ್ಟಾವಾದಿ ಉಪವಾಸ ಸತ್ಯಾಗ್ರಹ ನಡೆಸುವುದು. ಅನಿವಾರ್ಯವಾಗುತ್ತದೆಂದಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE